# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ – 143 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 24–12–2024 ಮಂಗಳವಾರ | ಪುಟ: 4 | ಬೆಲೆ : ರೂ.2–00
Volume - 02 Issue - 143 | RNI No: KARKAN/2023/88462 | KA/SK/CTA-874/2024-2026 | Chitradurga | Date: 24-12-2024 Tuesday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಕೃಷಿ ಚಟುವಟಿಕೆಯಲ್ಲಿ ತಾಂತ್ರಿಕತೆಗೆ ಒತ್ತು ನೀಡಿ: ಶಾಸಕ ರಘುಮೂರ್ತಿ 2

ಎಲ್ಲಾ ತಾಯಂದಿರು ಸೀರಿಯಲ್ ಹುಚ್ಚು ಬಿಡಿ ಮಕ್ಕಳ ಕಡೆ ಹೆಚ್ಚು ಗಮನ ಕೊಡಿ 3

ಗುರಿಯಷ್ಟು ಸಾಧನೆ ಕೊರತೆ, ಜನರಿಗೆ ಯೋಜನೆ ತಲುಪಿಸಲು ಜಾಗೃತಿಗೆ ಕ್ರಮ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಗ್ರಾಮ ಆಡಳಿತಾಧಿಕಾರಿ ಹುದ್ದೆ: ದಾಖಲಾತಿಗಳ ಪರಿಶೀಲನೆ

» **ಚಿತ್ರದುರ್ಗ**

ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಗ್ರಾಮ ಆಡಳಿತಾಧಿಕಾರಿ ಹುದ್ದೆಗಳಿಗೆ ನಡೆಸಲಾದ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಅಭ್ಯರ್ಥಿಗಳು ಗಳಿಸಿರುವ ಅಂತಿಮ ಅಂಕಪಟ್ಟಿಯನ್ನು ಪ್ರಕಟಿಸಲಾಗಿದೆ. ಗ್ರಾಮ ಆಡಳಿತಾಧಿಕಾರಿಗಳ ನೇಮಕಾತಿ ಪ್ರಕ್ರಿಯೆ ಪೂರ್ಣಗೊಳಿಸುವಂತೆ ಸೂಚಿಸಲಾಗಿದ್ದು, ಅದರಂತೆ ಚಿತ್ರದುರ್ಗ ಜಿಲ್ಲಾ ಕಂದಾಯ ಘಟಕದಲ್ಲಿ ಖಾಲಿ ಇರುವ 32 ಅನುಮೋದನೆಯಾಗಿರುವ ಹುದ್ದೆಗಳಿಗೆ ಕರ್ನಾಟಕ ನಾಗರೀಕ ಸೇವಾ (ನೇರ ನೇಮಕಾತಿ, ಸಾಮಾನ್ಯ) ನಿಯಮಗಳನುಸಾರ ನೇಮಕಾತಿ ಪ್ರಕ್ರಿಯೆ ಪೂರ್ಣಗೊಳಿಸುವ ಸಂಬಂಧ ಪ್ರಾಧಿಕಾರ ನೀಡಿರುವ ಮೆರಿಟ್ ಪಟ್ಟಿಯಲ್ಲಿ 1:3 ಅನುಪಾತದಂತೆ ದಾಖಲಾತಿಗಳ ಪರಿಶೀಲನೆ ಸಂಬಂಧ ಜಿಲ್ಲಾಧಿಕಾರಿಗಳ ಕಚೇರಿ ಜಾಲತಾಣ https://chitradurga.nic.in ನಲ್ಲಿ ಮತ್ತು ಜಿಲ್ಲಾಧಿಕಾರಿಗಳ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ. ಡಿ.20ರಂದು ಅಧಿಸೂಚನೆಯಲ್ಲಿ ನಿಗಧಿಯಾಗಿರುವ ಹುದ್ದೆಗಳ ಎದುರಾಗಿ 1:3 ಅನುಪಾತದಂತೆ ಅಭ್ಯರ್ಥಿಗಳ ಪಟ್ಟಿಯನ್ನು ಪ್ರಕಟಿಸಲಾಗಿದೆ. 2025ರ ಜನವರಿ 2 ರಿಂದ 10ರವರೆಗೆ 1:3 ಅನುಪಾತದಲ್ಲಿನ ಅಭ್ಯರ್ಥಿಗಳ ದಾಖಲೆಗಳನ್ನು ಪರಿಶೀಲನೆ ಮತ್ತು ವಿಕಲಚೇತನ ಅಭ್ಯರ್ಥಿಗಳ ವೈದ್ಯಕೀಯ ಪರೀಕ್ಷೆ ನಡೆಸಲಾಗುವುದು. ಜನವರಿ 15 ರಂದು ತಾತ್ಕಾಲಿಕ 1:1 ಆಯ್ಕೆ ಪಟ್ಟಿ ಮತು ಹೆಚ್ಚುವರಿ ಪಟ್ಟಿ ಪ್ರಕಟಿಸಲಾಗುತ್ತದೆ. ಈ ಕುರಿತು ಯಾವುದೇ ಆಕ್ಷೇಪಣೆಗಳು ಇದ್ದಲ್ಲಿ 2025ರ ಜನವರಿ 16 ರಿಂದ 23 ರೊಳಗೆ ಆಕ್ಷೇಪಣೆಗಳನ್ನು ಸಲ್ಲಿಸಬಹುದು. ಜ.27ರಂದು ಅಂತಿಮ ಆಯ್ಕೆಪಟ್ಟಿ ಮತ್ತು ಹೆಚ್ಚುವರಿ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗುವುದು. ಅಭ್ಯರ್ಥಿಗಳು ಹೆಚ್ಚಿನ ವಿವರಗಳಿಗೆ ಚಿತ್ರದುರ್ಗ ಜಿಲ್ಲಾಧಿಕಾರಿಗಳ ಕಾರ್ಯಾಲಯ ಸಂಪರ್ಕಿಸಬಹುದು. ಆಕ್ಷೇಪಣೆಗಳನ್ನು ಸರ್ಕಾರಿ ರಜೆ ದಿನಗಳನ್ನು ಹೊರತುಪಡಿಸಿ ಕಚೇರಿ ವೇಳೆಯಲ್ಲಿ ಸಲ್ಲಿಸಬಹುದಾಗಿದೆ. ಅಭ್ಯರ್ಥಿಗಳ ದಾಖಲೆಗಳ ಪರಿಶೀಲನೆಯನ್ನು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆಸಲಾಗುವುದು ಎಂದು ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

### ಡಿ.29ರಂದು ವಧು ವರರ ರಾಜ್ಯ ಮಟ್ಟದ ಸಮಾವೇಶ

» **ಚಿತ್ರದುರ್ಗ**

ನಗರದ ಬಸವೇಶ್ವರ ವಧು–ವರರ ಮಾಹಿತಿ ಕೇಂದ್ರದ ವತಿಯಿಂದಸರ್ವಧರ್ಮೀಯರ ವಧು–ವರರ ರಾಜ್ಯ ಮಟ್ಟದ ಸಮಾವೇಶವನ್ನು ದಿನಾಂಕ 29.12.2024 ರ ಭಾನುವಾರ ಬೆಳಗ್ಗೆ 11 ಗಂಟೆಗೆ ನಗರದ ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದಲ್ಲಿ ಆಯೋಜಿಸಿಲಾಗಿದೆ ಎಂದು ವ್ಯವಸ್ಥಾಪಕರಾದ ಜೆ.ಎಂ .ಜಂಬಯ್ಯ ನವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಅಂದಿನ ಸಮಾವೇಶದ ಅಧ್ಯಕ್ಷತೆಯನ್ನುಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದ ಆಡಳಿತ ಮಂಡಳಿಯ ಅಧ್ಯಕ್ಷರಾದ ಶಿವಯೋಗಿ. ಸಿ.ಕಳಸದವರು ವಹಿಸಲಿದ್ದು, ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 9448011825.. 9980658625 ಗೆ ಸಂಪರ್ಕಿಸಲು ಕೋರಿದ್ದಾರೆ.

### ಕಚೇರಿ ಸ್ಥಳಾಂತರ

» **ಚಿತ್ರದುರ್ಗ**

ಚಿತ್ರದುರ್ಗ ಉಪವಿಭಾಗ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ತಾಲ್ಲೂಕು ವಿಸ್ತರಣಾಧಿಕಾರಿಗಳ ಕಚೇರಿಯನ್ನು ಈ ಹಿಂದೆ ಕಾರ್ಯನಿರ್ವಹಿಸುತ್ತಿದ್ದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳ ಕಚೇರಿ ಜಿಲ್ಲಾ ಮಾಹಿತಿ ಕೇಂದ್ರಕ್ಕೆ ಸ್ಥಳಾಂತರಿಸಲಾಗಿದೆ. ತಾಲ್ಲೂಕು ವಿಸ್ತರಣಾಧಿಕಾರಿಗಳು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಚಿತ್ರದುರ್ಗ ಉಪವಿಭಾಗ ಸರಸ್ವತಿ ಪುರಂ 1ನೇ ಮುಖ್ಯರಸ್ತೆ ಚಿತ್ರದುರ್ಗ ಈ ಕಚೇರಿಯನ್ನು ಈ ಹಿಂದೆ ಕಾರ್ಯನಿರ್ವಹಿಸುತ್ತಿದ್ದ ಜಿಲ್ಲಾ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರವು ಆಡಳಿತಾತ್ಮಕ ಕಾರಣಗಳಿಂದ ಪ್ರಸ್ತುತ ಜಿಲ್ಲಾ ಅಧಿಕಾರಿಗಳ ಕಚೇರಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಶ್ರೀರಾಮ ಕಾಂಪ್ಲೆಕ್ಸ್, 1ನೇ ಮಹಡಿ, ಸ್ಟೇಡಿಯಂ ರಸ್ತೆ, ಚಿತ್ರದುರ್ಗ ಇಲ್ಲಿಗೆ ಸ್ಥಳಾಂತರಗೊಂಡಿರುವುದರಿಂದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವಿವಿಧ ಯೋಜನೆಗಳ ಫಲಾನುಭವಿಗಳು ಕಚೇರಿಯ ವಿಳಾಸಕ್ಕೆ ಭೇಟಿ ನೀಡಿ, ಅಗತ್ಯ ಮಾಹಿತಿ, ನೆರವು ಪಡೆಯಬಹುದು ಎಂದು ವಿಸ್ತರಣಾಧಿಕಾರಿಗಳು ತಿಳಿಸಿದ್ದಾರೆ.

# ಪ್ರತಿ ಗ್ರಾಮದಲ್ಲಿ ಹುಡುಕಿ ಅರ್ಹರಿಗೆ ಪಿಂಚಣಿ ಕೊಡಿಸಿ: ಶಾಸಕ ಟಿ.ರಘುಮೂರ್ತಿ ಸೂಚನೆ

» **ನಮ್ಮಜನ ಸಮಾಚಾರ**

ಚಿತ್ರದುರ್ಗ: ಕಂದಾಯ ಇಲಾಖೆಯ ಸಹಯೋಗದಲ್ಲಿ ತಾಲೂಕು, ಹೋಬಳಿ ಮಟ್ಟದಲ್ಲಿ ಏರ್ಪಡಿಸುವ ಪಿಂಚಣಿ ಅದಾಲತ್ (ಸಾಮಾಜಿಕ ಭದ್ರತಾ ಯೋಜನೆಗಳ ಮಂಜೂರಾತಿ) ಸೌಲಭ್ಯಗಳ ಸದುಪಯೋಗವನ್ನು ಅರ್ಹರು ಪಡೆಯಬೇಕು ಮತ್ತು ಯಾರು ಸಹ ಸರ್ಕಾರದ ಸೌಲಭ್ಯದಿಂದ ವಂಚಿತರಾಗದಂತೆ ನೋಡಿಕೊಳ್ಳಿ ಎಂದು ಶಾಸಕ ಮತ್ತು ಸಣ್ಣ ಕೈಗಾರಿಕೆಗಳು ಅಭಿವೃದ್ಧಿ ನಿಗಮದ ಅಧ್ಯಕ್ಷ ಟಿ.ರಘುಮೂರ್ತಿ ಅಧಿಕಾರಿಗಳಿಗೆ ಸೂಚಿಸಿದರು.


ಚಿತ್ರದುರ್ಗ ತಾಲೂಕಿನ ತುರುವನೂರು ಹೋಬಳಿಯ ತುರುವನೂರು ಗ್ರಾಮದಲ್ಲಿ ನಡೆದ ಪಿಂಚಣಿ ಅದಾಲತ್ ಕಾರ್ಯಕ್ರಮದಲ್ಲಿ ಪಿಂಚಣಿ ಪ್ರಮಾಣ ಪತ್ರ ವಿತರಣೆ ಮಾಡಿ ಮಾತನಾಡಿದರು.

ತುರುವನೂರು ಹೋಬಳಿಯಲ್ಲಿ ಇಂದು 50 ಫಲಾನುಭವಿಗಳಿಗೆ ಪಿಂಚಣಿ ಪ್ರಮಾಣ ವಿತರಿಸಿದ್ದೇವೆ. ತುರುವನೂರು ಹೋಬಳಿಯಲ್ಲಿ ಈಗಾಗಲೇ 8834 ಜನ ಫಲಾನುಭವಿಗಳು ಪಿಂಚಣಿ ಪಡೆಯುತ್ತಿದ್ದು ಮುಂದಿನ ದಿನಗಳಲ್ಲಿ ಪಿಂಚಣಿ ಸೌಲಭ್ಯದಿಂದ ಎಲ್ಲಾರನ್ನೂ ಪಿಂಚಣಿಸೌಲಭ್ಯಒದಗಿಸಲುಅಧಿಕಾರಿಗಳು ಪ್ರತಿ ಹಳ್ಳಿಯಲ್ಲಿ ಪರಿಶೀಲನೆ ನಡೆಸಬೇಕು ಎಂದು ಶಾಸಕರು ಅಧಿಕಾರಿಗಳಿಗೆ ತಾಕೀತು ಮಾಡಿದರು.

ತುರುವನೂರು ಗ್ರಾಮ ಮತ್ತು ಹೋಬಳಿಯ ಹಳ್ಳಿಗಳಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ತುರ್ತಾಗಿ ಪೂರ್ಣಗೊಳಿಸಬೇಕು. ತುರುವನೂರು ಗ್ರಾಮದಲ್ಲಿ ಡಿಗ್ರಿ ಕಾಲೇಜು ಕಾಮಗಾರಿ ಪೂರ್ಣಗೊಂಡಿದೆ. ರಸ್ತೆ ಕಾಮಗಾರಿಗಳನ್ನು ಹಂತ ಹಂತವಾಗಿ ಮಾಡಲಾಗುತ್ತಿದೆ.

ನಮ್ಮ ಸರ್ಕಾರದ ಜನಪ್ರಿಯ ಯೋಜನೆಗಳಾದ ಗೃಹಲಕ್ಷ್ಮಿ, ಗೃಹಜ್ಯೋತಿ, ಅನ್ನ ಭಾಗ್ಯ, ಶಕ್ತಿ ಯೋಜನೆ ಸೇರಿ ಸರ್ಕಾರದ ಸೌಲಭ್ಯದಿಂದ ಹೊರಗುಳಿದ ಕುಟುಂಬಗಳನ್ನು ಸರ್ಕಾರದ ಸೌಲಭ್ಯ ಪಡೆಯುವ ಕಡೆ ಜನರನ್ನು ಕರೆ ತರಬೇಕು ಎಂದರು.

ಈ ಸಂದರ್ಭದಲ್ಲಿ ಚಿತ್ರದುರ್ಗ ಜಿಲ್ಲಾ ಉಪ ವಿಭಾಗಾಧಿಕಾರಿ ಕಾರ್ತಿಕ್, ಚಿತ್ರದುರ್ಗ ತಹಶೀಲ್ದಾರ್ ನಾಗವೇಣಿ, ಮಾ.ಜಿಪಂ ಸದಸ್ಯ ಬಾಬುರೆಡ್ಡಿ, ಗ್ರಾಮ ಪಂಚಾಯಿತಿ ಅಧ್ಯಕ್ಷೆ ನಾಗರತ್ನ, ಉಪಾಧ್ಯಕ್ಷ ತಿಪ್ಪೇಸ್ವಾಮಿ, ಸದಸ್ಯರಾದ ಡಿ.ಆರ್.ಮಂಜುನಾಥ್, ನಾಗವೇಣಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಖಾಲಿಂ ಮತ್ತು ಇತರೆ ಇಲಾಖೆ ಅಧಿಕಾರಿಗಳು, ಸಾರ್ವಜನಿಕರು ಹಾಜರಿದ್ದರು.



> ಪ್ರತಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಎಲ್ಲಾ ಹಳ್ಳಿಗಳಲ್ಲಿ ಅರ್ಹ ಪಿಂಚಣಿ ಸೌಲಭ್ಯ ವಂಚಿತರಾಗಿರುವವರಿಗೆ ಪಿಂಚಣಿ ಸೌಲಭ್ಯ ಒದಗಿಸಬೇಕು.ಪಿಂಚಣಿ ಬರ್ತಿಲ್ಲ ಎಂಬ ಮಾತು ಎಲ್ಲೂ ಸಹ ಜನರಿಗೆ ಬರಬಾರದು ಆ ರೀತಿಯಲ್ಲಿ ಅಧಿಕಾರಿಗಳು ಕೆಲಸ ಮಾಡಬೇಕು.
>
> » **ಟಿ.ರಘುಮೂರ್ತಿ ಶಾಸಕ ಚಳ್ಳಕೆರೆ ವಿಧಾನಸಭಾ ಕ್ಷೇತ್ರ**

## ದೊಡ್ಡಬೀರನಹಳ್ಳಿಯಲ್ಲಿ ಸಮುದಾಯ ಭವನಕ್ಕೆ ಶಂಕು

» **ಪರಶುರಾಂಪುರ**

ಸಮುದಾಯ ಭವನಗಳಲ್ಲಿ ಸಮಾಜಮುಖಿ ಕಾರ್ಯಗಳನ್ನು ಹಮ್ಮಿಕೊಂಡು, ಅದರ ಸದ್ಬಳಕೆಗೆ ಮುಂದಾಗಬೇಕು ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಸಮೀಪದ ದೊಡ್ಡಬೀರನಹಳ್ಳಿ ಗ್ರಾಮದಲ್ಲಿ ನಡೆದ ಶ್ರೀ ತಾಯಿ ಮುದ್ದಮ್ಮ ದೇವಿಯ ಕಾರ್ತಿಕೋತ್ಸವ ಮತ್ತು 2024–25ನೇ ಸಾಲಿನ ಶಾಸಕರ ಸ್ಥಳೀಯ ಪ್ರದೇಶ ಅಭಿವೃದ್ಧಿ ಯೋಜನೆಯಡಿ ಸುಮಾರು 25 ಲಕ್ಷ ರೂ.ಗಳ ವೆಚ್ಚದಲ್ಲಿ ದೇವಸ್ಥಾನದ ಹತ್ತಿರ ಸಮುದಾಯ ಭವನದ ನಿರ್ಮಾಣ ಕಾಮಗಾರಿಯ ಭೂಮಿ ಪೂಜಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಪೂಜೆ ಸಲ್ಲಿಸಿದರು.ಗುಣಮಟ್ಟದ ಸಮುದಾಯ ಭವನ ನಿರ್ಮಿಸಿಕೊಳ್ಳಲು ಆದ್ಯತೆ ನೀಡಬೇಕು, ಭವನಗಳನ್ನು ನಿರ್ಮಾಣ ಮಾಡಿ ಅವನ್ನು ಹಾಗೇ ಬಿಡುವುದಲ್ಲ. ಪ್ರತಿಯೊಬ್ಬರಿಗೂ ಚರ್ಚೆ, ವಿಚಾರ ವಿನಿಮಯ ಮಾಡಿಕೊಳ್ಳುವ ಕೇಂದ್ರಗಳಾಗಿ ನಿರ್ಮಾಣವಾಗಬೇಕಿದೆ ಎಂದು ಸಲಹೆ ನೀಡಿದರು.



ಈ ಸಂದರ್ಭದಲ್ಲಿ ನಿರ್ಮಿತಿ ಕೇಂದ್ರದ ಇಂಜಿನಿಯರ್ ಸಿದ್ದೇಶ್, ಚರಣ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಜಿ.ಟಿ.ಶಶಿಧರ, ನಗರಸಭೆ ಸದಸ್ಯ ರಮೇಶ್ ಗೌಡ, ಜಿಲ್ಲಾ ಗ್ಯಾರೆಂಟಿ ಸಮಿತಿಯ ಸದಸ್ಯ ಚನ್ನಕೇಶವ, ತಾಲ್ಲೂಕು ಗ್ಯಾರೆಂಟಿ ಸಮಿತಿಯ ಸದಸ್ಯ ಅನಿಲ್ ಕುಮಾರ್, ಗ್ರಾಮ ಪಂಚಾಯಿತಿ ಅಧ್ಯಕ್ಷ ಜಯಮ್ಮ, ಸದಸ್ಯ ಪ್ರಸನ್ನಕುಮಾರ್, ತಾಲ್ಲೂಕು ಪಂಚಾಯತ್ ಕೆಡಿಪಿ ನಾಮ ನಿರ್ದೇಶನ ಸದಸ್ಯ ಬಸವರಾಜ್, ಮುಖಂಡರುಗಳಾದ ಬೊಪ್ಪಣ್ಣ, ಸುರೇಶ್, ಜಯಣ್ಣ, ನಾಗರಾಜ್, ಹನುಮಂತರಾಯ, ಗ್ರಾಮದ ಹಿರಿಯರು,ಮುಖಂಡರು, ಕಾರ್ಯಕರ್ತರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ಇಂದು ರಾಷ್ಟ್ರೀಯ ಗ್ರಾಹಕರ ದಿನಾಚರಣೆ

**ಚಿತ್ರದುರ್ಗ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಕಾನೂನು ಮಾಪನಾಶಾಸ್ತ್ರ ಇಲಾಖೆ, ಸರಸ್ವತಿ ಕಾನೂನು ಕಾಲೇಜು, ಎಸ್.ಜೆ.ಎಂ ಕಾನೂನು ಕಾಲೇಜು, ಜಿಲ್ಲಾ ವಕೀಲರ ಸಂಘ ಹಾಗೂ ಜಿಲ್ಲಾ ಗ್ರಾಹಕರ ಮಾಹಿತಿ ಕೇಂದ್ರದ ಸಹಯೋಗದಲ್ಲಿ ಇದೇ ಡಿ.24ರಂದು ಬೆಳಿಗ್ಗೆ 10.30ಕ್ಕೆ ನಗರದ ತರಾಸು ರಂಗಮಂದಿರದಲ್ಲಿ "ರಾಷ್ಟ್ರೀಯ ಗ್ರಾಹಕರ ದಿನಾಚರಣೆ" ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. "ಗ್ರಾಹಕರ ನ್ಯಾಯಕ್ಕಾಗಿ ವರ್ಚುವಲ್ ವಿಚಾರಣೆಗಳು ಮತ್ತು ಡಿಜಿಟಲ್ ಹಾದಿ" ಎಂಬ ಘೋಷವಾಕ್ಯದೊಂದಿಗೆ ದಿನಾಚರಣೆ ಹಮ್ಮಿಕೊಂಡಿದ್ದು, ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಅಧ್ಯಕ್ಷತೆ ವಹಿಸುವರು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ರೋಣ ವಾಸುದೇವ್ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಪ್ರಭಾರ ಸದಸ್ಯ ಕಾರ್ಯದರ್ಶಿ ಮತ್ತು 1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶೆ ಚೈತ್ರ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷೆ ಹೆಚ್. ಎನ್.ಮೀನಾ, ವಕೀಲರ ಸಂಘದ ಅಧ್ಯಕ್ಷ ವೈ.ತಿಪ್ಪೇಸ್ವಾಮಿ, ಸರಸ್ವತಿ ಕಾನೂನು ಕಾಲೇಜು ಪ್ರಾಂಶುಪಾಲೆ ಡಾ.ಎಂ.ಹೆಚ್.ಸುಧಾದೇವಿ, ಎಸ್.ಜೆ.ಎಂ ಕಾನೂನು ಕಾಲೇಜಿನ ಪ್ರಾಂಶುಪಾಲ ಡಾ.ಎಸ್.ದಿನೇಶ್ ಭಾಗವಹಿಸುವರು. ಪ್ರಧಾನ ಕಾನೂನು ನೆರವು ಅಭಿರಕ್ಷಕ ಎಸ್.ವಿಜಯ್ ಕುಮಾರ್ ಅವರು "ಗ್ರಾಹಕರ ಸಂರಕ್ಷಣಾ ಕಾಯ್ದೆ" ಕುರಿತು ಉಪನ್ಯಾಸ ನೀಡುವರು ಎಂದು ಪ್ರಕಟಣೆ ತಿಳಿಸಿದೆ.

**ಪ್ರಮುಖ ಸುದ್ದಿ**

### ಡಿ.28,29 ರಂದು ರಾಜ್ಯ ಮಟ್ಟದ 4ನೇ ವೈಜ್ಞಾನಿಕ ಸಮ್ಮೇಳನ

# ದುರ್ಗದ ಡಾ.ಪಾಲಾಕ್ಷ, ಸುಧಾ, ಶೋಭಾಗೆ ಪ್ರಶಸ್ತಿ

» **ಚಿತ್ರದುರ್ಗ**

ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತು ದೊಡ್ಡಬಳ್ಳಾಪುರ–ಬೆಂಗಳೂರು ಉತ್ತರ ಶೈಕ್ಷಣಿಕ ಜಿಲ್ಲೆ. ಕರ್ನಾಟಕ ರಾಜ್ಯ ಶಾಲಾ ಕಾಲೇಜುಗಳ ಒಕ್ಕೂಟ, ಕರ್ನಾಟಕ ರಾಜ್ಯ ಮಾನವ ಬಂಧುತ್ವ ವೇದಿಕೆ ಹಾಗೂ ಕರ್ನಾಟಕ ಸರ್ಕಾರದ ಮಾಹಿತಿ ಮತ್ತು ತಂತ್ರಜ್ಞಾನ ಇಲಾಖೆ ಇವುಗಳ ಸಹಯೋಗದೊಂದಿಗೆ ಇದೇ ವಾರ ಡಿ.28 ಮತ್ತು 29ರಂದು 2 ದಿನಗಳ ಕಾಲ ಬಾಗಲೂರಿನ ವಿ.ಜೆ ಇಂಟರ್ ನ್ಯಾಷನಲ್ ಶಾಲಾ ಮೈದಾನದಲ್ಲಿ ರಾಜ್ಯ ಮಟ್ಟದ 4ನೇ ವೈಜ್ಞಾನಿಕ ಸಮ್ಮೇಳನವನ್ನು ಹಮ್ಮಿಕೊಳ್ಳಲಾಗಿದೆ ಎಂದು ಪರಿಷತ್ತಿನ ಜಿಲ್ಲಾ ಘಟಕದ ಅಧ್ಯಕ್ಷ ನಾಗರಾಜ್ ಸಂಗಂ ತಿಳಿಸಿದ್ದಾರೆ.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಾಡಿನ ಹಿರಿಯ ರಂಗಭೂಮಿ ಕಲಾವಿದೆ, ಚಿತ್ರನಟಿ ಹಾಗೂ ವಿಧಾನಪರಿಷತ್ ಸದಸ್ಯೆ ಉಮಾಶ್ರೀಯವರ ಸರ್ವಾಧ್ಯಕ್ಷತೆಯಲ್ಲಿ ಸಮ್ಮೇಳನ.ನಡೆಯಲಿದೆ.ಈಸಮ್ಮೇಳನದಲ್ಲಿ ವಿವಿಧ ವಿಜ್ಞಾನ ವಸ್ತು ಪ್ರದರ್ಶನ, ವೈವಿದ್ಯಮಯವಾದ ಆಹಾರ, ಕರಕುಶಲ ಮೇಳ ಹಾಗೂ ಆಕರ್ಷಕ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆಯಲ್ಲದೇ, ಪ್ರಮುಖ ವೈಜ್ಞಾನಿಕ ವಿಷಯಗಳ ಮೇಲೆ ಬೆಳಕು ಚೆಲ್ಲಲಾಗುತ್ತದೆ ಎಂದರು.

ಪರಿಷತ್ತು ಆರಂಭವಾಗಿ 4 ವರ್ಷಗಳನ್ನು ಯಶಸ್ವಿಯಾಗಿ ಕಳೆದಿದ್ದು, ಜಸ್ಟೀಸ್ ನಾಗಮೋಹನ್ ದಾಸ್, ಇಸ್ರೋದ ಮಾಜಿ ಅಧ್ಯಕ್ಷರು ಹಾಗೂ ವಿಜ್ಞಾನಿ ಡಾ.ಕಿವಿ, ಎಸ್. ಕಿರಣ್ ಕುಮಾರ್ ಮತ್ತು ಅನೇಕ ಗಣ್ಯ ಚಿಂತಕರ ಮಾರ್ಗದರ್ಶನದಲ್ಲಿ ರಾಜ್ಯ ಮಟ್ಟದಲ್ಲಿ ಅನೇಕ ಕಾರ್ಯಕ್ರಮಗಳನ್ನು ನಡೆಸುತ್ತಾ ಬರಲಾಗಿದೆ ಚಿತ್ರದುರ್ಗ ಜಿಲ್ಲಾ ಘಟಕದಿಂದ ಪ್ರತಿ ವರ್ಷವು ಜಿಲ್ಲಾ ಮಟ್ಟದಲ್ಲಿ ವೈಜ್ಞಾನಿಕ ಸಮ್ಮೇಳನ ಮತ್ತು ಅತಿ ಹೆಚ್ಚು ಅಂಕಗಳಿಸಿದ ಎಸ್. ಎಸ್. ಎಲ್. ಸಿ. ಮತ್ತು ಪಿ.ಯು.ಸಿ. ದ್ವಿತಿಯ ವರ್ಷದಲ್ಲಿ ಶೇ.90ಕ್ಕೂ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳನ್ನು ಗುರುತಿಸಿ ಪ್ರತಿಭಾ ಪುರಸ್ಕಾರ ಕಾರ್ಯಕ್ರಮಗಳನ್ನು ನಡೆಸುತ್ತಾ ಬರಲಾಗಿದೆ. ಅಲ್ಲದೆ ಪ್ರತಿ ತಿಂಗಳು ವಿಜ್ಞಾನದ ನಡಿಗೆ– ಶಾಲೆಯ ಕಡೆಗೆ' ಎಂಬ ಘೋಷಾ ವಾಕ್ಯದೊಂದಿಗೆ, ಮಕ್ಕಳಲ್ಲಿ ವೈಜ್ಞಾನಿಕ ಚಿಂತನೆ ಮೂಡಿಸುವ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ.



ಪ್ರತಿ ವರ್ಷ ರಾಜ್ಯಮಟ್ಟದ ವೈಜ್ಞಾನಿಕ ಸಮ್ಮೇಳನ ಕಾಯಕರತ್ನ ಪ್ರಶಸ್ತಿ, ಹೆಚ್. ಎನ್.ಪ್ರಶಸ್ತಿ, ಜೀವಮಾನ ಶೇ. ಸಾಧನಾ ಪ್ರಶಸ್ತಿ ಪ್ರದಾನ, ನಾಯಕತ್ವ ಶಿಬಿರ, ಸ್ಮರಣ ಸಂಚಿ ವಿಜ್ಞಾನ ಸಿರಿ ಮಾಸ ಪತ್ರಿಕೆ ಹೀಗೆ ಅನೇಕ ಕಾರ್ಯಕ್ರಮಗಳ ಪರಿಷತ್ತು ನಡೆಸುತ್ತ ಬಂದಿದೆ ರಾಜ್ಯದ ಪ್ರತಿ ಜಿಲ್ಲೆಗೆ ಒಬ್ಬರಂತೆ 37 ಜನರಿಗೆ ಈ ಮಟ್ಟದಲ್ಲಿ ಹೆಚ್.ಎನ್. ಪ್ರಶಸ್ತಿಯನ್ನು ನೀಡಲಾಗುವುದು ಪ್ರಥಮ ವೈಜ್ಞಾನಿಕ ಸಮ್ಮೇಳನವನ್ನು ಇಸ್ರೋದ ಅಧ್ಯಕ್ಷರು ಹಾಗೂ ವಿಜ್ಞಾನಿ ಡಾ।ಎ.ಎಸ್.ಕಿರಣ್ ಕುಮಾರ್ ಅವರು ಸರ್ವಾಧ್ಯಕ್ಷತೆಯಲ್ಲಿ ಶಿವಮೊಗ್ಗದ ಕುವೆಂಪು ರಂಗಮಂದಿರದಲ್ಲಿ ಆಯೋಜಿಸಲಾಗಿತ್ತು ಎರಡನೇ ಸಮ್ಮೇಳನವನ್ನು ಜಸ್ಟೀಸ್ ನಾಗಮೋಹನ್ ದಾಸ್ ಅವರ ಸರ್ವಾಧ್ಯಕ್ಷತೆಯಲ್ಲಿ ತುಮಕೂರಿನಲ್ಲಿ ನಡೆಸಲಾಗಿತ್ತು. ಮತ್ತು ಮೂರನೇ ಸಮ್ಮೇಳನವನ್ನು ರಾಯಚೂರು ಜಿಲ್ಲೆಯ ಲಿಂಗಸುಗೂರಿನಲ್ಲಿ ಸತೀಶ್ ಜಾರಕಿಹೊಳಿಯವರ ಸರ್ವಾಧ್ಯಕ್ಷತೆಯಲ್ಲಿ ನಡೆಯಿತು.

ನಾಲ್ಕನೇ ವೈಜ್ಞಾನಿಕ ಸಮ್ಮೇಳನದಲ್ಲಿ ಚಿತ್ರದುರ್ಗದ ಬಸವೇಶ್ವರ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆಯ ಮೆಡಿಕಲ್ ಸೂಪರಿಡೆಂಟ್ ಮತ್ತು ಪ್ರೊಫೆಸರ್ ಆದ ಡಾ.ಎಲ್.ಪಾಲಕ್ಷಯ್ಯರವರಿಗೆ ರಾಜ್ಯ ಮಟ್ಟದ ಹೆಚ್. ಎನ್. ಪ್ರಶಸ್ತಿ ಲಭಿಸಿದೆ ಮತ್ತು ಈ ವರ್ಷ ವಿಶೇಷವಾಗಿ ರಾಜ್ಯ ಮಟ್ಟದಲ್ಲಿ ಮಹಿಳೆಯರಿಗಾಗಿ ನೀಡುತ್ತಿರುವ ಚೈತನ್ಯಶ್ರೀ ಪಶಸ್ತಿಗೆ ತಾಲ್ಲೂಕಿನ ಸಿಬಾರದ ವಿಶ್ವಮಾನವ ಶಾಲೆಯ ಪ್ರಾಂಶುಪಾಲರಾದ ಗ್ರಾಮೀಣ ಮಕ್ಕಳಿಗೆ ವಿಜ್ಞಾನದ ಬಗ್ಗೆ ಆಸಕ್ತಿಯನ್ನು ಮೂಡಿಸಿ ಹೆಚ್ಚಿನ ವಿದ್ಯಾರ್ಥಿಗಳು ವಿಜ್ಞಾನ ವಿಷಯದಲ್ಲಿ ಉನ್ನತ ವ್ಯಾಸಾಂಗಕ್ಕೆ ಪ್ರೋತ್ಸಾಹಿಸಿರುವ ಶ್ರೀಮತಿ ಸುಧಾ ಹೆಚ್. ಆರ್ ಹಾಗೂ ಶೋಭಾ ಮಲ್ಲಿಕಾರ್ಜುನ್ ಆಯ್ಕೆಯಾಗಿದ್ದಾರೆ ಎಂದರು.

ಪುಟ ↘ 2

## ಫಾಸ್ಟ್ ನ್ಯೂಸ್

### ಲೋಕಾಯುಕ್ತ ಅಧಿಕಾರಿಗಳಿಂದ ಅಹವಾಲು ಸ್ವೀಕಾರ

» ಚಿತ್ರದುರ್ಗ

ಕರ್ನಾಟಕ ಲೋಕಾಯುಕ್ತ, ಚಿತ್ರದುರ್ಗ ವಿಭಾಗದ ಅಧಿಕಾರಿಗಳು ವಿವಿಧ ತಾಲ್ಲೂಕುಗಳಿಗೆ ಭೇಟಿ ನೀಡಿ, ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಲಿದ್ದಾರೆ. ಡಿ.23ರಂದು ಲೋಕಾಯುಕ್ತ ಪೊಲೀಸ್ ನಿರೀಕ್ಷಕರು, ಡಿ.24ರಂದು ಪೊಲೀಸ್ ನಿರೀಕ್ಷಕರು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 01.30 ರವರೆಗೆ ಹಿರಿಯೂರು ತಾಲ್ಲೂಕು ಕಚೇರಿಯಲ್ಲಿ, ಮಧ್ಯಾಹ್ನ 2.30 ರಿಂದ ಸಂಜೆ 5.30 ರವರೆಗೆ ಚಿತ್ರದುರ್ಗ ತಾಲ್ಲೂಕು ಕಚೇರಿಯಲ್ಲಿ ಉಪಸ್ಥಿತರಿದ್ದು, ಅಹವಾಲುಗಳನ್ನು ಸ್ವೀಕರಿಸುವರು. ಸರ್ಕಾರಿ ಕಚೇರಿಗಳಲ್ಲಿ ಕೆಲಸಗಳನ್ನು ಮಾಡಿಕೊಡಲು ಅಧಿಕಾರಿ, ಸಿಬ್ಬಂದಿ ಲಂಚದ ಹಣಕ್ಕಾಗಿ ಬೇಡಿಕೆ ಇಟ್ಟಲ್ಲಿ, ಅನಾವಶ್ಯಕ ವಿಳಂಬ, ಇತ್ಯಾದಿ ವಿಷಯಗಳ ದೂರುಗಳಿಗೆ ಸಂಬಂಧಿಸಿದಂತೆ ದೂರುಗಳನ್ನು ನಿಗದಿತ ನಮೂನೆ–1 ಮತ್ತು 2 ರಲ್ಲಿ ಸಲ್ಲಿಸಬಹುದಾಗಿದೆ ಎಂದು ಲೋಕಾಯುಕ್ತ ಚಿತ್ರದುರ್ಗ ವಿಭಾಗದ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿದ್ಯಾರ್ಥಿ ವೇತನಕ್ಕೆ ಇ- ಕೆವೈಸಿ ಕಡ್ಡಾಯ

» ಚಿತ್ರದುರ್ಗ

2024–25ನೇ ಸಾಲಿಗೆ ಮೆಟ್ರಿಕ್ ಪೂರ್ವ ಹಾಗೂ ನಂತರದ ವಿದ್ಯಾರ್ಥಿವೇತನ ಅಭಿಯಾನ ಕೈಗೊಳ್ಳಲಾಗಿದ್ದು, ಜಿಲ್ಲೆಯ ಎಲ್ಲಾ ಅರ್ಹ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳು ಇಲಾಖೆಯ ವೆಬ್ಸೈಟ್ ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್‌ನಲ್ಲಿ ಅರ್ಜಿ ಸಲ್ಲಿಸಬಹುದು. 2024–25ನೇ ಸಾಲಿನಿಂದ ಕೇಂದ್ರ ಪುರಸ್ಕೃತ ವಿದ್ಯಾರ್ಥಿವೇತನ ಕಾರ್ಯಕ್ರಮಗಳಿಗೆ ಆಧಾರ್‌ಆಧಾರಿತಬಯೋಮೆಟ್ರಿಕ್‌ಅಥೆಂಟಿಕೇಷನ್ ಅಂಡ್ ಇ–ಕೆವೈಸಿ ಕಡ್ಡಾಯವಾಗಿದೆ. ಈ ಸಂಬಂಧ ರಾಜ್ಯಾದ್ಯಂತ ಕಾರ್ಯನಿರ್ವಹಿಸುತ್ತಿರುವ ಗ್ರಾಮ ಒನ್, ಬೆಂಗಳೂರು ಒನ್ ಹಾಗೂ ಕರ್ನಾಟಕ ಒನ್ ಕೇಂದ್ರಗಳಲ್ಲಿ ಈ ಪ್ರಕ್ರಿಯೆಯನ್ನು ಉಚಿತವಾಗಿ ಕೈಗೊಳ್ಳಲಾಗಿದ್ದು, ಎಲ್ಲಾ ಅರ್ಹ ಫಲಾನುಭವಿಗಳು ಗ್ರಾಮ ಒನ್, ಕರ್ನಾಟಕ ಒನ್, ಬೆಂಗಳೂರು ಒನ್ ಹಾಗೂ ಸಂಬಂಧಿಸಿದ ಸಮಾಜ ಕಲ್ಯಾಣ ಇಲಾಖೆಗೆ ಭೇಟಿ ನೀಡಿ ಎಲ್ಲಾ ಅರ್ಹ ಫಲಾನುಭವಿಗಳು ಸಕಾಲದಲ್ಲಿ ಇ–ಕೆವೈಸಿ ನೊಂದಣಿ ಮಾಡಿಸಲು ಕೋರಿದೆ. ಚಿತ್ರದುರ್ಗ ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಜಿಲ್ಲೆಯ ಎಲ್ಲಾ ಸಹಾಯಕ ನಿರ್ದೇಶಕರ ಕಚೇರಿಗಳಲ್ಲಿ ವಿದ್ಯಾರ್ಥಿಗಳಿಂದ ಅರ್ಜಿ ಪಡೆಯಲು ಹಾಗೂ ಇ–ಕೆವೈಸಿ ಮಾಡಲು ಫೆಸಿಲಿಟೇಷನ್ ಕೇಂದ್ರಗಳನ್ನು ಆರಂಭಿಸಲಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ ತಿಳಿಸಿದ್ದಾರೆ.

### ತಂಬಾಕು ಮಾರಾಟ ಪರವಾನಿಗೆ ಕಡ್ಡಾಯ

» ಚಿತ್ರದುರ್ಗ

ನಗರ ವ್ಯಾಪ್ತಿಯಲ್ಲಿ ತಂಬಾಕು ಉತ್ಪನ್ನ ಮಾರಾಟ ಮಾಡುವ ವ್ಯಾಪಾರಿಗಳು ತಂಬಾಕು ಉತ್ಪನ್ನಗಳ ಮಾರಾಟಕ್ಕಾಗಿ ಪ್ರತ್ಯೇಕ ಪರವಾನಿಗೆ ಪಡೆಯುವುದು ಕಡ್ಡಾಯ.ತಂಬಾಕು ಉತ್ಪನ್ನ ಮಾರಾಟ ಪರವಾನಿಗೆಗಾಗಿ ವ್ಯಾಪರಸ್ಥರು ಚಿತ್ರದುರ್ಗ ನಗರಸಭೆಯ ಆರೋಗ್ಯ ನಿರೀಕ್ಷಕರನ್ನು ಸಂಪರ್ಕಿಸಿ ಉದ್ದಿಮೆ ಪರವಾನಿಗೆ ಅರ್ಜಿ ಪಡೆದು ಅಗತ್ಯ ದಾಖಲೆಗಳೊಂದಿಗೆ ಆನ್‌ಲೈನ್ ತಂತ್ರಾಂಶದ ಮೂಲಕ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ನಗರಸಭೆ ಅಧಿಕಾರಿಗಳನ್ನು ಸಂಪರ್ಕಿಸಬಹುದು ಎಂದು ನಗರಸಭೆ ಪೌರಾಯುಕ್ತೆ ಎಂ.ರೇಣುಕಾ ತಿಳಿಸಿದ್ದಾರೆ.

### 24ರಂದು ಮಕ್ಕಳ ರಕ್ಷಣಾ ನೀತಿ ಹಾಗೂ ಕಾಯ್ದೆ ತರಬೇತಿ

» ಚಿತ್ರದುರ್ಗ

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪೊಲೀಸ್ ಇಲಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಚಿತ್ರ ಡಾನ್‌ಬೋಸ್ಕೊ ಸಂಸ್ಥೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ವತಿಯಿಂದ ಇದೇ ಡಿ.24ರಂದು ಬೆಳಿಗ್ಗೆ 10.30ಕ್ಕೆ ನಗರದ ಚಿತ್ರ ಡಾನ್‌ಬೋಸ್ಕೊ ಪದವಿ ಕಾಲೇಜು ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ–2016 ಹಾಗೂ ವಿವಿಧ ಮಕ್ಕಳ ರಕ್ಷಣಾ ಕಾಯ್ದೆಗಳ ಬಗ್ಗೆ ಒಂದು ದಿನದ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಡಾ.ಕೆ.ಟಿ.ತಿಪ್ಪೇಸ್ವಾಮಿ ಉದ್ಘಾಟಿಸುವರು. ಜಿಲ್ಲಾಧಿಕಾರಿಟಿ.ವೆಂಕಟೇಶ್ ಅಧ್ಯಕ್ಷತೆವಹಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಸ್. ಜೆ.ಸೋಮಶೇಖರ್, ಪೊಲೀಸ್ ಅಧೀಕ್ಷಕ ರಂಜಿತ್ ಕುಮಾರ್ ಬಂಡಾರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಪಟ್ಟಸ್ವಾಮಿ, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ಪಿ.ಶೀಲಾ, ಚಿತ್ರಾ ಡಾನ್‌ಬಾಸ್ಕೊ ಸಂಸ್ಥೆಯ ನಿರ್ದೇಶಕ ಅಂತೋನಿ ರಾಜ್ ಹಾಗೂ ಹರೀಶ್ ಜೋಗಿ ಭಾಗವಹಿಸುವರು.

# ಬಾಲ್ಯವಿವಾಹ ಮಾಡಿ, ಮಕ್ಕಳ ಜೀವನ ಹಾಳುಮಾಡಬೇಡಿ



» ಚಿತ್ರದುರ್ಗ

ಬಾಲ್ಯವಿವಾಹ ನಡೆಸುವುದು ಶಿಕ್ಷಾರ್ಹ ಅಪರಾಧ. ಬಾಲ್ಯವಿವಾಹ ಮಾಡಿ ಮಕ್ಕಳ ಜೀವನ ಹಾಳು ಮಾಡಬೇಡಿ ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಹೇಳಿದರು.

ತಾಲ್ಲೂಕಿನ ಜೋಡಿಚಿಕ್ಕೇನಹಳ್ಳಿ ಗೊಲ್ಲರಹಟ್ಟಿ ಗ್ರಾಮದಲ್ಲಿ ಆರೋಗ್ಯ ಇಲಾಖೆ ವತಿಯಿಂದ ಈಚೆಗೆ ಹಮ್ಮಿಕೊಂಡಿದ್ದ ಬಾಲ್ಯವಿವಾಹ ತಡೆಗಟ್ಟಲು ಮಕ್ಕಳ ಪೋಷಕರ ಸಭೆಯಲ್ಲಿ ಅವರು ಮಾತನಾಡಿದರು.

ಬಾಲ್ಯವಿವಾಹ ಸಮಾಜದಲ್ಲಿ ಕೆಟ್ಟ ಆಚರಣೆಯಾಗಿದೆ. ಸಮಾಜಕ್ಕೆ ಇದೊಂದು ದೊಡ್ಡ ಪಿಡುಗಾಗಿ ಇವತ್ತಿಗೂ ಕಾಡುತ್ತಿದೆ. ಇದರ ವಿರುದ್ಧ ಜಾಗೃತಿ ಮೂಡಿಸಿ ಪಿಡುಗು ತಡೆಗಟ್ಟಲು ಸಮುದಾಯದ ಸಹಕಾರ ಅತ್ಯಗತ್ಯವಾಗಿದೆ ಎಂದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಮಾತನಾಡಿ, ಬಾಲ್ಯ ವಿವಾಹಕ್ಕೆ ಬಡತನ, ಅನಕ್ಷರತೆ, ಮೂಢನಂಬಿಕೆ ಸೇರಿದಂತೆ ಹಲವು ಕಾರಣ ನೀಡಬಹುದು. ಇದರಲ್ಲಿ ವರದಕ್ಷಿಣೆ ದೊಡ್ಡ ಸಮಸ್ಯೆಯಾಗಿದೆ. 21 ವರ್ಷ ಒಳಗಿನ ಹುಡುಗ ಹಾಗೂ 18 ವರ್ಷ ಒಳಗಿನ ಹುಡುಗಿಯರ ನಡುವೆ ಇಲ್ಲವೆ ಇಬ್ಬರಲ್ಲಿ ಒಬ್ಬರು ನಿಗದಿತ ವಯಸ್ಸಿನೊಳಗಿದ್ದರೂ ಇಂತಹ ಮದುವೆಯನ್ನು ಬಾಲ್ಯ ವಿವಾಹ ಎಂದು ಪರಿಗಣಿಸಲಾಗುತ್ತದೆ. ಇದನ್ನು ಆದಷ್ಟು ತಡೆಗಟ್ಟಿ ಬಾಲ್ಯವಿವಾಹ ಸಂಪೂರ್ಣವಾಗಿ ತೊಲಗಿಸಬೇಕು.ಪೋಷಕರಲ್ಲಿ ಹೆಚ್ಚಿನ ಅರಿವು ಮೂಡಿಸುವ ಮೂಲಕ ಬಾಲ್ಯ ವಿವಾಹ ತಡೆಗಟ್ಟಲು ಇಲಾಖೆ ಅಷ್ಟೇ ಅಲ್ಲದೆ ಎಲ್ಲರೂ ಮುಂದಾಗಬೇಕು. ಶಿಕ್ಷಣದ ಕೊರತೆಯಿಂದಾಗಿ ಇಂತಹ ಪಿಡುಗುಗಳು ಸಮಾಜದಲ್ಲಿ ಇಂದಿಗೂ ಕಾಡುತ್ತಿದೆ ಎಂದರು.ಕಾಸರಹಟ್ಟಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ.ಕಾವ್ಯ ಮಾತನಾಡಿ, ಬಾಲ್ಯ ವಿವಾಹದಿಂದ ಬಾಲ ಗರ್ಭಿಣಿಯರ ಸಂಖ್ಯೆ ಹೆಚ್ಚಾಗುತ್ತಿದ್ದು, ತಾಯಂದಿರ ಮರಣ ಶಿಶು ಮರಣಕ್ಕೆ ಕಾರಣವಾಗುತ್ತದೆ. ಹಾಗಾಗಿ ನಿಮ್ಮೆಲ್ಲರಲ್ಲಿ ನನ್ನ ಕಳಕಳಿಯ ಪ್ರಾರ್ಥನೆ, ಬಾಲ್ಯ ವಿವಾಹವನ್ನು ಮಾಡಬೇಡಿ ಎಂದರು.

ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆಯ ಶಿಕ್ಷಕರಾದ ಮಂಜುನಾಥ್ ಮಾತನಾಡಿ, ಶಿಕ್ಷಣ ಮೊದಲು ನಂತರ ವಿವಾಹ ಮಾಡುವುದು ಉತ್ತಮ ಜೀವನಕ್ಕೆ ನಾಂದಿ ಹಾಡುತ್ತದೆ ಎಂದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾತನಾಡಿ, 100 ದಿನಗಳ ಕ್ಷಯರೋಗ ನಿಯಂತ್ರಣ ಅಭಿಯಾನದ ಕುರಿತು ಬಗ್ಗೆ ಮಾಹಿತಿ ನೀಡಿದರು.

ಜೆ.ಎನ್.ಕೋಟೆ ಗ್ರಾಮ ಪಂಚಾಯಿತಿ ಸದಸ್ಯೆ ವಿಜಯಮ್ಮ, ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿ ಪವಿತ್ರ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ತುಕಾರಾಂ, ಶಾಲಾ ಶಿಕ್ಷಕರು, ಆಶಾ ಕಾರ್ಯಕರ್ತೆಯರು, ಪೋಷಕರು ಭಾಗವಹಿಸಿದ್ದರು.

# ಕಾಲೇಜ್ ಆಫ್ ಎಕ್ಸಲೆನ್ಸ್ ಕಟ್ಟಡ ಉದ್ಘಾಟನೆ



» ಚಿತ್ರದುರ್ಗ

ಪರಿಸರ ಪ್ರೇಮಿ ಹೆಚ್.ವೆಂಕಟೇಶ್ ನಮ್ಮ ಮಠದೊಂದಿಗೆ ಅವಿನಾಭಾವ ಸಂಬಂಧವಿಟ್ಟುಕೊಂಡಿದ್ದರು ಎಂದು ಕಬೀರಾನಂದಾಶ್ರಮದ ಶಿವಲಿಂಗಾನಂದ ಮಹಾಸ್ವಾಮಿಗಳು ಸ್ಮರಿಸಿದರು.

ಚಳ್ಳಕೆರೆ ರಸ್ತೆ ಮದಕರಿಪುರ ಬಡಾವಣೆಯಲ್ಲಿರುವ ಅಪ್ಪಾಜಿ ಸಿರಿಯಲ್ಲಿ ನೂತನವಾಗಿ ನಿರ್ಮಿಸಲಾಗಿರುವ ಮಂಜುನಾಥಸ್ವಾಮಿ ಎಜುಕೇಷನಲ್ ಅಂಡ್ ಚಾರಿಟಬಲ್ ಟ್ರಸ್ಟ್ ಎಸ್.ಎಂ.ಎಸ್. ಸ್ಕೂಲ್ ಮತ್ತು ಕಾಲೇಜ್ ಆಫ್ ಎಕ್ಸಲೆನ್ಸ್ ಇದರ ನೂತನ ಕಟ್ಟಡ ಉದ್ಘಾಟಿಸಿ ಮಾತನಾಡಿದರು.

ಹೆಚ್.ವೆಂಕಟೇಶ್ ಸದಾ ನಮ್ಮ ಮಠದ ಪರಮ ಭಕ್ತರಾಗಿದ್ದರು. ಅವರಲ್ಲಿ ಜಾತಿ ಕಲ್ಪನೆಯಿರಲಿಲ್ಲ. ಮನುಷ್ಯ ಜಾತಿ ಎಲ್ಲರು ಒಂದೆ ಎಂಬ ಭಾವನೆಯಿಟ್ಟುಕೊಂಡಿದ್ದರು. ಅವರ ಹಾದಿಯಲ್ಲಿಯೇ ಅವರ ಮಕ್ಕಳು, ಕುಟುಂಬ ಸಾಗುತ್ತಿದೆ. ಇಂತಹ ಸ್ಪರ್ಧಾತ್ಮಕ ಕಾಲದಲ್ಲಿ ಶಿಕ್ಷಣ ಸಂಸ್ಥೆ ನಡೆಸುವುದು ಕಷ್ಟದ ಕೆಲಸ. ಆದರೂ ತಂದೆಯ ಆಸೆಯನ್ನು ನೆರವೇರಿಸಿದ್ದಾರೆ. 1986 ರಲ್ಲಿಯೇ ಹೆಚ್.ವೆಂಕಟೇಶ್ ಸಣ್ಣದಾಗಿ ಶಿಕ್ಷಣ ಸಂಸ್ಥೆಯನ್ನು ಆರಂಭಿಸಿದ್ದರು. ಈಗ ಅವರ ಮಕ್ಕಳಾದ ಡಾ.ಪ್ರಶಾಂತ್ ಮತ್ತು ಪ್ರವೀಣ್ ಇವರುಗಳು ದೊಡ್ಡ ಶಿಕ್ಷಣ ಸಂಸ್ಥೆ ಆರಂಭಿಸಿರುವುದು ನಿಜಕ್ಕೂ ಸಂತೋಷದ ಸಂಗತಿ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಮಾಜಿ ಸಚಿವ ಹೆಚ್.ಆಂಜನೇಯ ಮಾತನಾಡಿ ಈ ಭಾಗದಲ್ಲಿ ಯಾವುದೇ ಶಾಲೆ ಕಾಲೇಜು ಇಲ್ಲ. ಸುತ್ತಮುತ್ತಲಿನ ಐದಾರು ಗ್ರಾಮದ ಬಡ ಮಕ್ಕಳ ಶಿಕ್ಷಣಕ್ಕೆ ಈ ಸಂಸ್ಥೆ ಅನುಕೂಲವಾಗಲಿದೆ. ಪರಿಸರ ಪ್ರೇಮಿ ಹೆಚ್.ವೆಂಕಟೇಶ್‌ರವರಲ್ಲಿ ಏನಾದರೂ ಸಾಧನೆ ಮಾಡಬೇಕೆಂಬ ಛಲವಿತ್ತು. ಯಾವುದೇ ಒಂದು ಶಿಕ್ಷಣ ಸಂಸ್ಥೆ ಆರಂಭಿಸಬೇಕಾದರೆ ಆರ್ಥಿಕ ಸಂಪನ್ಮೂಲದ ಜೊತೆ ಕಾಯಕ ಶ್ರದ್ದೆ ಇರಬೇಕು. ಈ ನಿಟ್ಟಿನಲ್ಲಿ ವೆಂಕಟೇಶ್‌ರವರ ಕುಟುಂಬ ತಂದೆಯ ಕನಸನ್ನು ಈಡೇರಿಸುವತ್ತ ಹೆಜ್ಜೆ ಇಡುತ್ತಿದೆ ಎಂದು ಶ್ಲಾಘಿಸಿದರು.ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಂ.ಸಿ.ರಘುಚಂದನ್ ಮಾತನಾಡಿ ವಿದ್ಯಾಸಂಸ್ಥೆ ಕಟ್ಟುವುದು ಸುಲಭ. ಆದರೆ ಮುನ್ನಡೆಸಿಕೊಂಡು ಹೋಗುವುದು ಜವಾಬ್ದಾರಿ ಕೆಲಸ. ಪೈಪೋಟಿ ಯುಗದಲ್ಲಿ ಗುಣಾತ್ಮಕ ಶಿಕ್ಷಣ ಮಕ್ಕಳಿಗೆ ಸಿಗಬೇಕು. ಶಾಲಾ–ಕಾಲೇಜು ತೆರೆಯಬೇಕೆಂದರೆ ಹಣದ ಅವಶ್ಯಕತೆಯಿದೆ. ಅದರ ಜೊತೆ ಸಂಸ್ಥೆಯಲ್ಲಿ ಕೆಲಸ ಮಾಡುವ ಹತ್ತಾರು ಮಂದಿಗೆ ಜೀವನಕ್ಕೆ ದಾರಿ ತೋರಿಸಿದಂತಾಗುತ್ತದೆ ಎಂದು ಹೇಳಿದರು.

ಮಾಜಿ ಶಾಸಕ ಎಸ್.ಕೆ.ಬಸವರಾಜನ್, ವಿಧಾನಪರಿಷತ್‌ಸಭಾಪತಿಬಸವರಾಜ್‌ಹೊರಟ್ಟಿ, ಶಾಸಕ ಕೆ.ಸಿ.ವೀರೇಂದ್ರಪಪ್ಪಿ, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಬಾಲರಾಜ್, ಮಾಜಿ ಸದಸ್ಯ ರವಿಕುಮಾರ್, ನಗರಸಭೆ ಉಪಾಧ್ಯಕ್ಷೆ ಶ್ರೀದೇವಿ ಚಕ್ರವರ್ತಿ ಅಭಿಯಂತರ ರಾಹುಲ್‌ದೇವ್ ಡಿ. ಹೆಚ್.ಯಲ್ಲಪ್ಪ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ಶಾಂತಮ್ಮ ವೆಂಕಟೇಶ್ ವೇದಿಕೆಯಲ್ಲಿದ್ದರು.ಡಾ.ವಿ.ಎಲ್.ಪ್ರಶಾಂತ್ ಪ್ರಾಸ್ತಾವಿಕವಾಗಿ ಮಾತನಾಡಿದರು. ವಿ.ಎಲ್.ಪ್ರವೀಣ್ ಈ ಸಂದರ್ಭದಲ್ಲಿ ಹಾಜರಿದ್ದರು.

# ಮಾರುತಿ ಸಾಂಸ್ಕೃತಿಕ ಕಲಾ ಸಂಘದಿಂದ ಸಂಗೀತ ಸಂಭ್ರಮ



» ಚಿತ್ರದುರ್ಗ

ಜಾನಪದ ಸಂಗೀತವನ್ನು ಮುಂದಿನ ಪೀಳಿಗೆಗೆ ಹರಡುವ ಕೆಲಸವನ್ನು ಆಯಿತೋಳು ವಿರುಪಾಕ್ಷಪ್ಪ ಕುಟುಂಬ ನಿರ್ವಹಿಸಿಕೊಂಡು ಬರುತ್ತಿದೆ ಎಂದು ನ್ಯಾಯವಾದಿ ಸಿ.ಶಿವುಯಾದವ್ ಹೇಳಿದರು.

ಮಾರುತಿ ಸಾಂಸ್ಕೃತಿಕ ಕಲಾ ಸಂಘ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದೊಂದಿಗೆ ತ.ರಾ.ಸು.ರಂಗಮಂದಿರದಲ್ಲಿ ಸೋಮವಾರ ನಡೆದ ಸಂಗೀತ ಸಂಭ್ರಮವನ್ನು ತಬಲ ಬಾರಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಮೂರನೆ ತಲಮಾರಿನ ಆಯಿತೋಳು ವಿರುಪಾಕ್ಷಪ್ಪ ಕುಟುಂಬ ಕಲೆಯನ್ನು ಪೋಷಿಸಿ ಬೆಳೆಸಿಕೊಂಡು ಬರುತ್ತಿದೆ. ಕಲಾವಿದರ ಬದುಕು ಸಂಕಷ್ಟದಲ್ಲಿದೆ. ಸರ್ಕಾರ ಇಂತಹ ಕಲಾವಿದರಿಗೆ ನೆರವು ನೀಡುವಲ್ಲಿ ಮುಂದಾಗಬೇಕೆಂದು ಒತ್ತಾಯಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಪ್ರೊ. ಗುರುನಾಥ್ ಮಾತನಾಡಿ ವಿದ್ಯಾರ್ಥಿಗಳು ಪಠ್ಯದಲ್ಲಿ ಮತ್ತು ಸಹ ಪಠ್ಯದಲ್ಲಿ ಕಲಿಯುವ ವಿಷಯಗಳಿಗೆ ಭಿನ್ನತೆಯಿಲ್ಲ. ಶಿಕ್ಷಣದ ಜೊತೆ ಸಂಸ್ಕಾರವಂತರಾದರೆ ಒಳ್ಳೆಯ ಸಮಾಜ ನಿರ್ಮಾಣವಾಗುತ್ತದೆ. ಸಂಗೀತದಿಂದ ಮನಸ್ಸಿಗೆ ನೆಮ್ಮದಿ ಸಿಗುತ್ತದೆ. ಏಕೆಂದರೆ ಎಲ್ಲರನ್ನು ತಲೆದೂಗಿಸುವ ಶಕ್ತಿ ಸಂಗೀತಕ್ಕಿದೆ. ಸಂಗೀತ ಸಂಭ್ರಮದಂತ ಕಾರ್ಯಕ್ರಮಗಳನ್ನು ಶಾಲಾ–ಕಾಲೇಜುಗಳಲ್ಲಿ ನಡೆಸಿ ಮಕ್ಕಳಿಗೆ ಮುಟ್ಟಿಸುವ ಕೆಲಸವಾಗಬೇಕೆಂದು ಸಲಹೆ ನೀಡಿದರು.

ಹಿರಿಯ ರಂಗಭೂಮಿ ಕಲಾವಿದ ತಿಪ್ಪೇಸ್ವಾಮಿ, ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ ಸಹಾಯಕ ನಿರ್ದೇಶಕ ಮಲ್ಲಿಕಾರ್ಜುನ್, ಕರ್ನಾಟಕ ರಾಜ್ಯ ನಾಟಕ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ಆಯಿತೋಳು ವಿರುಪಾಕ್ಷಪ್ಪ, ರಂಗಭೂಮಿ ಕಲಾವಿದ ತಬಲ ವಾದಕ ಜಿ.ಎನ್.ಚಂದ್ರಪ್ಪ ವೇದಿಕೆಯಲ್ಲಿದ್ದರು. ಸಂಗೀತ ಸಂಭ್ರಮದಲ್ಲಿ ಸೋಬಾನೆ ಪದ, ಸಂಗೀತ ಹಾಡಲಾಯಿತು.




# ಜಿಲ್ಲಾ ಕಾಂಗ್ರೆಸ್ ಪ.ಜಾತಿ ವಿಭಾಗದ ಪ್ರಧಾನ ಕಾರ್ಯದರ್ಶಿಯಾಗಿ ರಾಮಪ್ಪ ನೇಮಕ

**ಚಿತ್ರದುರ್ಗ:** ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಪರಿಶಿಷ್ಟ ಜಾತಿಗಳ ವಿಭಾಗದ ಅಧ್ಯಕ್ಷ ಆರ್.ಧರ್ಮಸೇನರವರ ಆದೇಶದಂತೆ ಜಿಲ್ಲಾ ಕಾಂಗ್ರೆಸ್ ಪರಿಶಿಷ್ಟ ಜಾತಿಗಳ ವಿಭಾಗದ ಪ್ರಧಾನ ಕಾರ್ಯದರ್ಶಿಯನ್ನಾಗಿ ಪಿಳ್ಳೆಕೆರನಹಳ್ಳಿ ಗ್ರಾಮದ ಎನ್.ರಾಮಪ್ಪ ಇವರನ್ನು ನೇಮಕ ಮಾಡಲಾಗಿದೆ. ಜಿಲ್ಲಾ ಕಾಂಗ್ರೆಸ್ ಎಸ್ಸಿ. ವಿಭಾಗದ ಜಿಲ್ಲಾಧ್ಯಕ್ಷ ಎಸ್.ಜಯಣ್ಣ ಕಾಂಗ್ರೆಸ್ ಕಚೇರಿಯಲ್ಲಿ ಎನ್. ರಾಮಪ್ಪನವರಿಗೆ ನೇಮಕ ಪತ್ರ ವಿತರಿಸಿ ಪಕ್ಷ ಸಂಘಟನೆಯಲ್ಲಿ ಪ್ರಾಮಾಣಿಕವಾಗಿ ಶ್ರಮಿಸುವಂತೆ ಸೂಚಿಸಿದರು. ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ಕಾಂಗ್ರೆಸ್ ಪರಿಶಿಷ್ಟ ಜಾತಿ ವಿಭಾಗದ ಪ್ರಧಾನ ಕಾರ್ಯದರ್ಶಿ ದುರುಗೇಶ್, ಉಪಾಧ್ಯಕ್ಷ ಡಿ.ಕುಮಾರಸ್ವಾಮಿ ಕಾರ್ಯದರ್ಶಿ ಆರ್.ರಮೇಶ್, ಎಲ್.ಕೆ.ರಾಬರ್ಟ್, ನಗರ ಬ್ಲಾಕ್ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಸುಧಾ ಡಿ.ಎಸ್.ಹಳ್ಳಿ, ಕಾಂಗ್ರೆಸ್ ಉಪಾಧ್ಯಕ್ಷೆ ಭಾಗ್ಯಮ ಈ ಸಂದರ್ಭದಲ್ಲಿದ್ದರು.



## ಪ್ರಮುಖ ಸುದ್ದಿ

# ಕೃಷಿ ಚಟುವಟಿಕೆಯಲ್ಲಿ ತಾಂತ್ರಿಕತೆಗೆ ಒತ್ತು ನೀಡಿ: ಶಾಸಕ



» ಚಳ್ಳಕೆರೆ

ಇತ್ತೀಚಿನ ದಿನಗಳಲ್ಲಿ ರಾಜ್ಯ ಸರ್ಕಾರ ಕೃಷಿ ಇಲಾಖೆಗೆ ಹೆಚ್ಚು ಪ್ರೋತ್ಸಾಹ ನೀಡುತ್ತಾ ಬಂದಿದೆ. ರೈತರ ಹಲವಾರು ಸಮಸ್ಯೆಗಳನ್ನು ನಿಯಂತ್ರಿಸುವಮೂಲಕರೈತರುನೆಮ್ಮದಿಯ ಬದುಕು ಕಂಡುಕೊಳ್ಳಲು ಸರ್ಕಾರ ಎಲ್ಲ ಸಹಕಾರ ನೀಡುತ್ತಿದೆ. ರೈತರು ಆರ್ಥಿಕ ಸ್ವಾವಲಂಬನೆಯನ್ನು ಸಾಧಿಸಬೇಕಾದಲ್ಲಿ ಕೃಷಿಯಲ್ಲಿ ತಾಂತ್ರಿಕ ಚಟುವಟಿಕೆಗಳನ್ನು ಅಳವಡಿಸಿಕೊಳ್ಳಬೇಕೆಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ನಗರ ಕೃಷಿ ಇಲಾಖೆಯ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ರೈತರ ದಿನಾಚರಣೆ ಕಾರ್ಯಕ್ರಮವನ್ನು ಗಿಡಕ್ಕೆ ನೀರು ಎರೆಯುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಪ್ರತಿವರ್ಷವೂ ಕೃಷಿ ಇಲಾಖೆಯಲ್ಲಿ ಅಮೂಲಾಗ್ರ ಬದಲಾವಣೆಯನ್ನು ನಿರೀಕ್ಷೆ ಮಾಡಲಾಗುತ್ತಿದೆ. ಕಳೆದ ವರ್ಷ, ಪ್ರಸ್ತುತ ವರ್ಷವೂ ಮಳೆ ಕೊರತೆಯಾಗಿಲ್ಲ. ಆದರೂ ಬಹುತೇಕ ಜಮೀನುಗಳಲ್ಲಿ ಶೇಂಗಾ ಬಿತ್ತನೆ ಕುಂಠಿತವಾಗಿದೆ. ರೈತರು ಅಕಾಲಿಕ ಮಳೆಯಿಂದ ಈ ಸಮಸ್ಯೆ ಎದುರಿಸುತ್ತಿದ್ದಾರೆ. ತಾಲ್ಲೂಕಿನ ರೈತರ ಸ್ಥಿತಿಯ ಬಗ್ಗೆ ಸಾಕಷ್ಟು ಮಾಹಿತಿ ಪಡೆದಿದ್ದು, ರೈತರ ಹಿತದೃಷ್ಠಿಯಿಂದ ಮುಖ್ಯಮಂತ್ರಿಗಳಿಗೆ ಗಮನಕ್ಕೆ ತರುವ ಭರವಸೆ ನೀಡಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಉಪಕೃಷಿ ನಿರ್ದೇಶಕ ಪ್ರಭಾಕರ್, ಕಳೆದ ಜೂನ್ ಮತ್ತು ಜುಲೈ ಮಾಹೆಯಲ್ಲಿ ವಾಡಿಕೆಗಿಂತ ಹೆಚ್ಚು ಮಳೆಯಾಗಿ ರೈತರು ಸಂತೋಷದಿಂದಲೇ ಕೃಷಿ ಚಟುವಟಿಕೆಗಳಿಗೆ ಚಾಲನೆ ನೀಡಿದರು. ತದನಂತರದ ದಿನಗಳಲ್ಲಿ ಬಿತ್ತನೆಯಾಗಿ ಸಾಕಷ್ಟು ದಿನಗಳೆದರೂ ಮಳೆಯ ದರ್ಶನವಾಗಲಿಲ್ಲ. ಇದು ರೈತರಿಗೆ ಆತಂಕವನ್ನುಂಟು ಮಾಡಿತ್ತು. ಶೇಂಗಾ ಬಿತ್ತನೆ ಮಾಡಿದ ನಂತರ ಉತ್ತಮ ಮಳೆಯಾಗಿದ್ದಲ್ಲಿ ಶೇ.80ರಷ್ಟು ಬೆಳೆಯಾಗುವ ನಿರೀಕ್ಷೆ ಇತ್ತು. ಆದರೆ, ಸಕಾಲಿಕವಾಗಿ ಮಳೆಬಾರದ ಕಾರಣ ಶೇಂಗಾ ಬೆಳೆಯೂ ಸಹ ಈ ಬಾರಿ ಕೈಕೊಟ್ಟಿದೆ. ಆದರೂ ಸರ್ಕಾರಕ್ಕೆ ರೈತರ ಹಿತದೃಷ್ಠಿಯಿಂದ ನಷ್ಟದ ವರದಿ ಕಳಿಸಿರುವುದಾಗಿ ತಿಳಿಸಿದರು.

ಅಖಂಡ ಕರ್ನಾಟಕ ರೈತ ಸಂಘ ಮಾಜಿ ರಾಜ್ಯಾಧ್ಯಕ್ಷ ಸೋಮಗುದ್ದುರಂಗಸ್ವಾಮಿ, ರೈತ ಸಂಘದ ಹಿರಿಯ ಉಪಾಧ್ಯಕ್ಷರಾದ ರೆಡ್ಡಿಹಳ್ಳಿವೀರಣ್ಣ, ರಾಜ್ಯ ಉಪಾಧ್ಯಕ್ಷ ಕೆ.ಪಿ.ಭೂತಯ್ಯ ರೈತರಿಗೆ ಶುಭಹಾರೈಸಿದರು. ಸಮಗ್ರಕೃಷಿ ಬೇಸಾಯಪದ್ಧತಿ ಅಳವಡಿಸಿಕೊಂಡ ಪ್ರಗತಿಪರ ರೈತರಾದ ಚಿಕ್ಕೇನಹಳ್ಳಿ ಪ್ರೇಮಕ್ಕ, ವಡೇರಹಳ್ಳಿಮಾರಣ್ಣ, ದುರ್ಗಾವರ ಕೃಷ್ಣಮೂರ್ತಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಇಒ ಶಶಿಧರ, ತೋಟಗಾರಿಕೆ ಅಧಿಕಾರಿ ವಿರೂಪಾಕ್ಷಪ್ಪ, ಕೃಷಿ ಅಧಿಕಾರಿ ಜೆ.ಅಶೋಕ್, ಪಶು ವೈದ್ಯ ರೇವಣ್ಣ, ನಂದಿನಿ, ಶಿವಲೀಲಾ, ಜೀವನ್ ಮಂಜುನಾಥ, ತಿಪ್ಪೇಸ್ವಾಮಿ, ಗುರುನಾಥ, ಕಿಸಾನ್ ಸೇಲ್ ಜಿಲ್ಲಾಧ್ಯಕ್ಷ ನಾಗರಾಜು, ಕೆಡಿಪಿ ಸದಸ್ಯ ಅಂಗಡಿರಮೇಶ್, ಚೌಳೂರುಬಸವರಾಜು, ಜಿಲ್ಲಾ ಕೆಡಿಪಿ ಸದಸ್ಯ ಓ.ರಂಗಸ್ವಾಮಿ ಇದ್ದರು.

## ಫಾಸ್ಟ್ ನ್ಯೂಸ್

### ಡಿ.28,29 ರಂದು ರಾಜ್ಯ ಮಟ್ಟದ 4ನೇ ವೈಜ್ಞಾನಿಕ ಸಮ್ಮೇಳನ


» ಮೊದಲ ಪುಟದಿಂದ

ಸಮ್ಮೇಳನವನ್ನು ಉದ್ಘಾಟಿಸಲು ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರಿಗೆ ಆಹ್ವಾನ ನೀಡಲಾಗಿದೆ. ಕೇಂದ್ರ ಹಾಗೂ ರಾಜ್ಯದ ಸಚಿವರುಗಳು, ಸಂಸದರು, ಶಾಸಕರು. ವಿಧಾನಪರಿಷತ್ ಸದಸ್ಯರು. ಸ್ಥಳೀಯ ಜನಪ್ರತಿನಿಧಿಗಳು, ವಿಜ್ಞಾನಿಗಳು, ಸಾಮಾಜಿಕ ಚಿಂತಕರು, ವಿದ್ಯಾರ್ಥಿಗಳು, ಉಪನ್ಯಾಸಕರು, ಶಿಕ್ಷಕರು ಸಮ್ಮೇಳನದಲ್ಲಿ ಭಾಗವಹಿಸಲಿದ್ದಾರೆ. ಸಮ್ಮೇಳನದಲ್ಲಿ ಭಾಗವಹಿಸುವವರಿಗೆ ಊಟ ಉಪಹಾರ ವ್ಯವಸ್ಥೆಯನ್ನು ಮಾಡಲಾಗಿದೆ ಹಾಗೂ ಹೊರಗಿನಿಂದ ಬರುವವರಿಗೆ ವಸತಿ ವ್ಯವಸ್ಥೆಯನ್ನು ಕಲಿಸಲಾಗುವುದು ಎಂದು ತಿಳಿಸಿದರು.

ಈ ಸಮ್ಮೇಳನದಲ್ಲಿ ವಿಶೇಷವಾಗಿ ರಾಜ್ಯ ಸರ್ಕಾರಕ್ಕೆ ಕರ್ನಾಟಕ ರಾಜ್ಯ ವೈಜ್ಞಾನ ಸಂಶೋಧನಾ ಪರಿಷತ್ತಿನಿಂದ ವಿವಿಧ ಈ ಹಕ್ಕೊತ್ತಾಯಗಳನ್ನು ಮಂಡಿಸಲಾಗುವುದು. ಈ ಡಿ.29 ವಿಶ್ವಕವಿ ಕುವೆಂಪು ಜನ್ಮದಿನದಂದು ಅ ವೈಜ್ಞಾನಿಕ ದಿನಾಚರಣೆಯನ್ನಾಗಿ ಆಚರಿಸಬೇಕು. ರಾಜ್ಯ ವಿಜ್ಞಾನ ಅಕಾಡೆಮಿಗೆ ಡಾ। ಹುಲಿಕಲ್ ನಟರಾಜ್‌ರನ್ನು ನೇಮಿಸಬೇಕು. ಪ್ರತಿ ಜಿಲ್ಲಾ " ಹಾಗೂ ತಾಲ್ಲೂಕು ಕೇಂದ್ರಗಳಲ್ಲಿ ವಿಜ್ಞಾನ – ಕೇಂದ್ರಗಳ ಸ್ಥಾಪನೆ, ಪರಿಷತ್ತು ಪ್ರತಿವರ್ಷ ನಡೆಸುವ ರಾಜ್ಯ ಮಟ್ಟದ ವೈಜ್ಞಾನ ಸಮ್ಮೇಳನಕ್ಕೆ ಅನುದಾನ, ರಾಜ್ಯದ ಎಲ್ಲಾ ಕಾಲಾ ಕಾಲೇಜುಗಳಲ್ಲಿ ವಿಜ್ಞಾನ ಪ್ರಯೋಗಾಲಯಗಳ ಸ್ಥಾಪನೆ, ಎಲ್ಲಾ ಶಿಕ್ಷಣ ಸಂಸ್ಥೆಗಳಲ್ಲಿ ವಿಜ್ಞಾನ ಸಮಿತಿಗಳ ರಚನೆ ಮತ್ತಿತರೆ ಬೇಡಿಕೆಗಳ ಬಗ್ಗೆ ಸಮ್ಮೇಳನದಲ್ಲಿ ಮಂಡಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಪ್ರಧಾನ ಕಾರ್ಯದರ್ಶಿ ಲೋಕೇಶ್, ಡಾ.ಮೋಹನ್, ಡಾ.ಕೃಷ್ಣಪ್ಪ, ಸುರೇಶ್, ಎನ್.ದೂಡ್ಡಪ್ಪ, ಡಾ.ತಿಪ್ಪೇಸ್ವಾಮಿ, ವಿ.ಚನ್ನಬಸಪ್ಪ, ದೇವಕಿ ರುದ್ರಪ್ಪ ಮತ್ತಿತರರು ಉಪಸ್ಥಿತರಿದ್ದರು.

### ಕಂಗುವಳ್ಳಿ ಗ್ರಾಮದ ಶ್ರೀ ಮಹೇಶ್ವರ ಸ್ವಾಮಿ ಜಾತ್ರಾ ಮಹೋತ್ಸವಕ್ಕೆ ಚಾಲನೆ



» ಹೊಸದುರ್ಗ

ತಾಲೂಕಿನ ಕಂಗುವಳ್ಳಿ ಗ್ರಾಮದ ಶ್ರೀ ಮಹೇಶ್ವರ ಸ್ವಾಮಿ ಜಾತ್ರಾ ಮಹೋತ್ಸವಕ್ಕೆ ಸೋಮವಾರದಿಂದ ಚಾಲನೆ ದೊರಕಿದ್ದು ಜಾತ್ರಾ ಮಹೊತ್ಸವದ ಅಂಗವಾಗಿ ಡಿ.24 ರಂದು ಮಂಗಳವಾರ ಮಧ್ಯಾಹ್ನ 1 ಗಂಟೆಗೆ 62 ನೇ ವರ್ಷದ ಶಿವತತ್ವ ಪ್ರಸಾರ ಕಾರ್ಯಕ್ರಮ ಜರುಗಲಿದ್ದು ಬಳ್ಳಾರಿ ಜಿಲ್ಲೆಯ ಎಮ್ಮಿಗನೂರು ಹಂಪಿ ಸಾವಿರ ದೇವರ ಮಹಾಂತಿನ ಮಠದ ಶ್ರೀ ವಾಮದೇವ ಮಹಾಂತ ಶಿವಾಚಾರ್ಯ ಸ್ವಾಮೀಜಿ,ದಿವ್ಯ ಸಾನಧ್ಯ ವಹಿಸಲಿದ್ದು ಗುಚ್ಚಿನ ಮಠದ ಶ್ರೀ ವರರುದ್ರಮುನಿ ಶಿವಾಚಾರ್ಯ ಸ್ವಾಮೀಜಿ,ಕೆ.ಬಿದಿರಿ ದೊಡ್ಡಮಠದ ಶ್ರೀ ಪ್ರಭುಕುಮಾರ ಶಿವಾಚಾರ್ಯ ಸ್ವಾಮೀಜಿ,ನಂದೀಪುರ ಉಜ್ಜಯಿನಿ ಶಾಖಾ ಮಠದ ಶ್ರೀ ನಂದೀಶ್ವರ ಶಿವಾಚಾರ್ಯ ಸ್ವಾಮೀಜಿ ಕಾರ್ಯಕ್ರಮದ ಸಮ್ಮುಖ ವಹಿಸಲಿದ್ದು ಸಂಸದ ಗೋವಿಂದ ಕಾರಜೋಳ ಹಾಗೂ ಹೊಸದುರ್ಗ ಶಾಸಕ ಬಿ.ಜಿ.ಗೋವಿಂದಪ್ಪ ಕಾರ್ಯಕ್ರಮವನ್ನ ಉದ್ಘಾಟಿಸಲಿದ್ದು ಕಂಗುವಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷ ರಾಮಪ್ಪ ಅಧ್ಯಕ್ಷತೆ ವಹಿಸಲಿದ್ದಾರೆ. ತೆಂಗು,ಅಡಿಕೆ ಹಾಗೂ ತೋಟಗಾರಿಕೆ ಬೆಳೆಗಳು ಸಸ್ಯ ಸಂರಕ್ಷಣೆ ಕುರಿತಂತೆ ಬೆಂಗಳೂರಿನ ಕೃಷಿ ವಿಜ್ಞಾನ ವಿಶ್ವವಿದ್ಯಾಲಯದ ಪ್ರೊಫೆಸರ್ ಡಾ:ಕೆ.ವಿ.ಪ್ರಕಾಶ್ ಹಾಗೂ ಚಿತ್ರದುರ್ಗ ಹಿರಿಯ ಸಹಾಯಕ ತೋಟಗಾರಿಕಾ ನಿರ್ದೇಶಕ ಡಾ:ಬಿ. ದೇವರಾಜ್ ಇವರಿಂದ ರೈತ ಸಂವಾದ ಗೋಷ್ಠಿ ನಡೆಯಲಿದ್ದು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ಪ್ರಶಸ್ತಿ ಹಾಗೂ ಸನ್ಮಾನ ಕಾರ್ಯಕ್ರಮ ಜರುಗಲಿದ್ದು ಇದೇ ಕಾರ್ಯಕ್ರಮದಲ್ಲಿ ಹೊನ್ನಾಳಿಯ ಅಭಿನೇತ್ರಿ ನಾಟ್ಯ ಮತ್ತು ಸಂಗೀತ ಮಂದಿರದ ಪ್ರಾಚಾರ್ಯರಾದ ಡಾ: ಪ್ರತಿಮ ನಿಜಗುಣಶಿವಯೋಗಿ ಇವರಿಂದ ನೃತ್ಯರೂಪ ಜರುಗಲಿದ್ದು ಇದೇ ದಿನ ರಾತ್ರಿ ಮಿಮಿಕ್ರಿ ಗೋಪಿ ಮತ್ತು ಟಿವಿ ಸಿನಿಮಾ ಹಾಸ್ಯ ಕಲಾವಿದರಿಂದ ನಗೆ ಹಬ್ಬ ಕಾರ್ಯಕ್ರಮ ನಡೆಯಲಿದ್ದು ಡಿ.25 ರಂದು ಬುಧವಾರ ಮಧ್ಯಾಹ್ನ 3 ಗಂಟೆಗೆ ಶ್ರೀ ರಾಮಲಿಂಗೇಶ್ವರ ಸನ್ನಿಧಿಯಲ್ಲಿ ಶ್ರೀ ಮಠದ ರಾಜಶೇಖರಯ್ಯನವರ ಸಮ್ಮುಖದಲ್ಲಿ ಶ್ರೀ ಸ್ವಾಮಿಯವರಿಗೆ ದೇಶ ಮಧ್ಯದ ಭಕ್ತಾಧಿಗಳಿಂದ ಕಾಣಿಕೆ ಸಲ್ಲಿಸುವುದು ಜೋತೆಗೆ ಕಡೂರು ತಾಲೂಕು ಆಸಂದಿಯ ಶ್ರೀ ಬಸವಶ್ರೀ ಮಹಿಳಾ ವೀರಗಾಸೆ ಕಲಾ ತಂಡದವರಿಂದ ವೀರಗಾಸೆ ಮತ್ತು ಕೀಲು ಕುದುರೆ ನೃತ್ಯ ನಡೆಯಲಿದ್ದು ಇದೇ ದಿನ ರಾತ್ರಿ 10 ಗಂಟೆಗೆ ತುಮಕೂರಿನ ಸಂಜಯ್ ನಾಣಿ ಅರ್ಪಿಸುವ ಸಮಜಯ್ ಈವೆಂಟ್ಸ್ ಆರ್ಕೆಸ್ಟ್ರಾ ಮನೋರಂಜನಾ ಕಾರ್ಯಕ್ರಮ ನಡೆಯಲಿದೆ.

# ಕೇಂದ್ರ ಸಂಪುಟದಿಂದ ಅಮಿತ್ ಶಾ ಕೈಬಿಡಿ

» ಚಿತ್ರದುರ್ಗ




ಡಾ. ಬಿ.ಆರ್ ಅಂಬೇಡ್ಕರ್‌ರವರ ಬಗ್ಗೆ ಅವಹೇಳನಕಾರಿಯಾದ ಮಾತುಗಳನ್ನು ಆಡಿದ ಕೇಂದ್ರ ಗೃಹ ಮಂತ್ರಿ ಅಮಿತ್ ಷಾರವರನ್ನು ಸಚಿವ ಸಂಪುಟದಿಂದ ಕಿತ್ತು ಹಾಕಬೇಕು, ಹಾಗೂ ಮಹಿಳೆಯರ ಬಗ್ಗೆ ಕೆಟ್ಟದಾಗಿ ಮಾತನಾಡಿದ ವಿಧಾನ ಪರಿಷತ್ ಸದಸ್ಯರಾದ ಸಿ.ಟಿ.ರವಿಯವರನ್ನು ಬಿಜೆಪಿ ಪಕ್ಷದಿಂದ ಹಾಗೂ ಪರಿಷತ್ ಸ್ಥಾನದಿಂದ ಉಚ್ಚಾಟಿಸುವಂತೆ ಆಗ್ರಹಿಸಿ ಆಮ್ ಆದ್ಮಿ ಪಾರ್ಟಿವತಿಯಿಂದ ಆಗ್ರಹಿಸಲಾಯಿತು.

ಚಿತ್ರದುರ್ಗ ನಗರದ ನೀಲಕಂಠೇಶ್ವರ ದೇವಾಲಯದಿಂದ ಪಾದಯಾತ್ರೆಯ ಮೂಲಕ ಜಿಲ್ಲಾಧಿಕಾರಿಗಳ ಕಚೇರಿಯವರೆಗೂ ಆಗಮಿಸಿದ ಆಮ್ ಆದ್ಮಿ ಪಾರ್ಟಿಯ ಪದಾಧಿಕಾರಿಗಳು ದಾರಿಯುದ್ದಕ್ಕೂ ಅಮಿತಾ ಷಾ ಹಾಗೂ ರವಿಯ ವಿರುದ್ಧ ಘೋಷಣೆಗಳನ್ನು ಕೂಗಲಾಯಿತು. ಇದ್ದಲ್ಲದೆ ಆವರನ್ನು ಪಾರ್ಟಿಯಿಂದ ಹೊರ ಹಾಕುವಂತೆಯೂ ಸಹಾ ಆಗ್ರಹಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಆಮ್ ಆದ್ಮಿ ಪಾರ್ಟಿಯ ಜಿಲ್ಲಾಧ್ಯಕ್ಷರಾದ ಬಿ.ಇ.ಜಗದೀಶ್ ನಮಗೆ ಅಂಬೇಡ್ಕರ್ ನೀಡಿದ ಸಂವಿಧಾನವೇ ದೇವರು, ಈ ದೇವರು ನೀಡಿದ ಸಂವಿಧಾನದಿಂದ ನಮ್ಮ ಬದುಕಿಗೆ ಸಹಾಯ ಸಹಕಾರಿಯಾಗಿದೆ, ಇದರಿಂದ ನಾವುಗಳು ಮನುಷ್ಯರಾಗಲು ಸಾಧ್ಯವಾಗಿದೆ, ಅಲ್ಲದೆ ಅಧಿಕಾರವನ್ನು ಅನುಭವಿಸಲು ಸಹಾ ಸಹಾಯವಾಗಿದೆ. ಬೇರೆ ಯಾವ ದೇವರು ಸಹಾ ನಮಗೆ ಸಹಾಯ ಮಾಡಿಲ್ಲ, ಅಲ್ಲದೆ ನಾವುಗಳು ದೇವರು ಹಾಗೂ ಸ್ವರ್ಗವನ್ನು ನೋಡಿಲ್ಲ, ನಮಗೆ ಅಂಬೇಡ್ಕರ್ ನೀಡಿದ ಸಂವಿಧಾನವೇ ದೇವರಾಗಿದೆ ಈ ಹಿನ್ನಲೆಯಲ್ಲಿ ನಾವುಗಳು ಅವರ ಜಪವನ್ನು ಮಾಡುತ್ತೇವೆ ಎಂದರು.

ನೀವುಗಳು ದೇವರನ್ನು ನಂಬುತ್ತೀರಾ ಸದಾ ಕಾಲ ದೇವರ ಜಪವನ್ನು ಮಾಡುತ್ತೀರ ನೀವುಗಳು ಸ್ವರ್ಗವನ್ನು ನೋಡಿದ್ದೀರಾ, ದೇವರನ್ನು ಭೇಟಿ ಮಾಡಿದ್ದೀರಾ ಎಂದು ಅವರನ್ನು ಪ್ರಶ್ನಿಸಿ, ಅಂಬೇಡ್ಕರ್ ನಮಗೆ ಉತ್ತಮವಾದ ಸಂವಿಧಾನವನ್ನು ನೀಡಿದ್ದಾರೆ ಇದೇ ನಮಗೆ ದೇವರು, ಇದನ್ನೇ ನಾವು ನಂಬುತ್ತೇವೆ, ಇದರಿಂದ ಇವರ ಜಪವನ್ನು ಮಾಡುತ್ತೇವೆ ಆದರೆ ನೀವುಗಳು ಇವರ ವಿರೋಧಿಯಾಗಿದ್ದೀರಾ ಈ ಹಿನ್ನಲೆಯಲ್ಲಿ ಅವರನ್ನು ವಿರೋಧ ಮಾಡಲಾಗುತ್ತಿದೆ, ನಮ್ಮಗಳ ಮೇಲೆ ಬಲವಂತವಾಗಿ ದೇವರ ಸಂಸ್ಕೃತಿಯನ್ನು ಹೇರುತ್ತಿದ್ದೀರಾ ಇದು ಸರಿಯಲ್ಲ ಎಂದರು.

ಆಮ್ ಆದ್ಮಿ ಪಾರ್ಟಿಯ ಮಹಿಳಾ ಘಟಕದ ಅಧ್ಯಕ್ಷರಾದ ಶ್ರೀಮತಿ ಜ್ಯೋತಿ ಮಾತನಾಡಿ ಬಿಜೆಪಿಯಲ್ಲಿ ಇರುವ ರವಿಯವರು ಮಹಿಳೆಯವರ ಬಗ್ಗೆ ಕೆಟ್ಟದಾಗಿ ಮಾತನಾಡಿದ್ದಾರೆ. ಅವರ ಮನೆಯ ಹೆಣ್ಣು ಮಕ್ಕಳ ಬಗ್ಗೆ ಈ ರೀತಿಯಾಗಿ ಮಾತನಾಡಿದರೇ ಸುಮ್ಮನೇ ಇರುತ್ತಿದ್ದರೇ, ಬೇರೆಯವರ ಹೆಣ್ಣು ಮಕ್ಕಳು ಹೆಣ್ಣು ಮಕ್ಕಳಲ್ಲಿವೇ ಚುನಾಯುತ ಪ್ರತಿನಿಧಿಗಳು ತಮ್ಮ ನಡೆ–ನುಡಿಯಲ್ಲಿ ಸರಿಯಾಗಿ ಇರಬೇಕಿದೆ ನೀವುಗಳು ಸಾರ್ವಜನಿಕ ಕ್ಷೇತ್ರದಲ್ಲಿ ಇರುವವರು ಜನತೆ ನಿಮ್ಮನ್ನು ನೋಡುತ್ತಿರುತ್ತಾರೆ ಎಂಬ ಗಮನ ಇರಬೇಕಿದೆ, ಮಹಿಳೆಯರನ್ನು ಆವಮಾನ ಮಾಡಿದ ರವಿಯವರನ್ನು ಕೂಡಲೇ ಬಿಜೆಪಿ ಪಕ್ಷದವತಿಯಿಂದ ಹಾಗೂ ವಿಧಾನ ಪರಿಷತ್ ಸದಸ್ಯತ್ವ ಸ್ಥಾನದಿಂದ ಉಚ್ಚಾಟನೆಯನ್ನು ಮಾಡುವಂತೆ ಆಗ್ರಹಿಸಿದರು.ಈ ಸಂದರ್ಭದಲ್ಲಿ ಜಿಲ್ಲಾ ಕಾರ್ಯದರ್ಶಿ ರಾಮಣ್ಣ, ಹೊಳಲ್ಕೆರೆ ತಾಲ್ಲೂಕು ಅಧ್ಯಕ್ಷ ಮಲ್ಲಿಕಾರ್ಜುನ್, ವಿನೋಧಮ್ಮ,ಶಿವಮ್ಮ,ರವಿ.ಸುಧಾಕರ್,ಪ್ರಹ್ಲಾದ್,ತನ್ವೀರ್,ಆಕ್ಬರ್ಖಾನ್,ಲೋಕೇಶ್,ಸಂದೀಪ್ ಸೇರಿದಂತೆ ಇತರರು ಭಾಗವಹಿಸಿದ್ದರು.

# ಎಲ್ಲಾ ತಾಯಂದಿರು ಸೀರಿಯಲ್ ಹುಚ್ಚು ಬಿಡಿ ಮಕ್ಕಳ ಕಡೆ ಹೆಚ್ಚು ಗಮನ ಕೊಡಿ

» ಹೊಸದುರ್ಗ



ಇಂದಿನ ದಿನಮಾನಗಳಲ್ಲಿ ಮಹಿಳೆಯರು ಟಿ.ವಿ ಯಲ್ಲಿ ಬರುವ ಧಾರವಾಹಿಗಳಿಗೆ ಹೆಚ್ಚು ಹೆಚ್ಚು ದಾಸರಾಗುತ್ತಿದ್ದಾರೆ, ಈ ಹಿನ್ನಲೆಯಲ್ಲಿ ಅವರ ಮಕ್ಕಳ ಶೈಕ್ಷಣಿಕ ಪ್ರಗತಿ ಕುಂಟಿತಾಗುತ್ತಿದೆ ದಯವಿಟ್ಟು ಮಕ್ಕಳ ಶೈಕ್ಷಣಿಕ ಪ್ರಗತಿಯಾಗಬೇಕಾದರೆ ಮೊದಲು ಎಲ್ಲಾ ತಾಯಂದಿರು ಸೀರಿಯಲ್ ಹುಚ್ಚು ಬಿಡಿ, ಮಕ್ಕಳ ಕಡೆ ಹೆಚ್ಚು ಗಮನ ಕೊಡಿ ಎಂದು ಪಟ್ಟಣದ ಪರ್ಲ್ ಎಜುಕೇಷನ್ ಟ್ರಸ್ಟ್ (ರಿ) ಹಾಗೂ ಶ್ರೀ ವೀರಶೈವ ಮಹಿಳಾ ಸಹಕಾರ ಸಂಘಧ ಅಧ್ಯಕ್ಷೆ ಶ್ರೀಮತಿ ಡಾ: ಅನಿತಾರಾಜೇಶ್ ಪೋಷಕರಿಗೆ ಕಿವಿ ಮಾತು ಹೇಳಿದರು.

ಪಟ್ಟಣದ ಪರ್ಲ್ ಎಜುಕೇಷನ್ ಟ್ರಸ್ಟ್ (ರಿ) ಎಸ್.ಡಿ.ಎ ಹಿರಿಯ ಪ್ರಾಥಮಿಕ ಹಾಗೂ ಪ್ರೌಢ ಶಾಲೆಯ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ 34 ನೇ ವರ್ಷದ ಶಾಲಾ ವಾರ್ಷಿಕೋತ್ಸವ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಎಸ್‌ಎಸ್‌ಎಲ್‌ಸಿ ಮುಗಿಸಿ ಪಿಯುಸಿ ಬರುವವರಿಗೆ ಇದೊಂದು ಟರ್ನಿಂಗ್ ಪಾಯಿಂಟ್. ಈ ಟರ್ನಿಂಗ್ ಪಾಯಿಂಟ್‌ನಲ್ಲಿ ಜಾಗೃತರಾಗಿ ಪ್ರಾರಂಭದಲ್ಲೇ ಚೆನ್ನಾಗಿ ಓದಿ ಯಶಸ್ವಿಯಾದರೆ ಮಾತ್ರ ನಿಮ್ಮ ಜೀವನದಲ್ಲಿ ಉತ್ತಮ ಭವಿಷ್ಯ ಸಿಗುತ್ತದೆ.

ಇಂದುಮೊಬೈಲ್‌ಎಂಬುದುಮಾರಕವಾಗಿದೆ. ಮೊಬೈಲ್‌ನ್ನು ಕಡಿಮೆ ಉಪಯೋಗಿಸಬೇಕು. ಅದರಲ್ಲಿಯೂ ಪೋಷಕರು ತಮ್ಮ ಮಕ್ಕಳಿಗೆ ಮೊಬೈಲ್‌ಗಳನ್ನು ಕೊಡಬಾರದು ಎಂದು ಕಿವಿಮಾತು ಹೇಳಿದರು.

ಸಂತ ಲೋಖಿನ ದೇವಾಲಯದ ಸಭಾ ಪಾಲಕರಾದ ಫಾದರ್ ರೆವರೆಂಡ್ ಸ್ಯಾಂಡ್ಲಿ ಫಂಟ ಸಾನಿಧ್ಯ ವಹಿಸಿದ್ದರು. ಟ್ರಸ್ಟ್ ಕಾರ್ಯದರ್ಶಿ ಕೃಪಾಕರ್.ಡಿ ರಾಯ್ ಜ್ಯೋತಿ ಬೆಳಗಿಸುವುದರ ಮೂಲಕ ಉದ್ಘಾಟಿಸಿ ಮಾತನಾಡಿದರು.

> ಮನೆಯಿಂದ ಸಂಸ್ಕಾರ ಕಲಿತು ಬಂದ ಮಗು ಶಿಕ್ಷಣದಲ್ಲಿ ದಾಪುಗಾಲು ಹಾಕುತ್ತದೆ, ತಾಯಿ ಪ್ರೀತಿಯ ಸಂಕೇತ ತಂದೆ ಜವಾಬ್ದಾರಿಯ ಸಂಕೇತ ಕುಟುಂಬದಲ್ಲಿ ತಂದೆ ತಾಯಿಯ ಪಾತ್ರ ಅತ್ಯಂತ ಪ್ರಮುಖವಾದದ್ದು
>
> » ಕೃಪಾಕರ್.ಡಿ ರಾಯ್,ಕಾರ್ಯದರ್ಶಿ ಪರ್ಲ್ ಎಜುಕೇಷನ್ ಟ್ರಸ್ಟ್ (ರಿ),ಹೊಸದುರ್ಗ

ಮುಖ್ಯ ಅತಿಥಿಗಳಾಗಿ ಶ್ರೀಮತಿ ಸವಿತಾರಮೇಶ್, ಡಿ.ಸಂಜಯ್, ಮಕ್ಕಳ ತಜ್ಞ ಡಾ:ಬಿ.ರವಿ,ಕೆ.ಪಿ.ಮೋಹನ್‌ಪ್ರಸಾದ್, ಶ್ರೀಮತಿ ಮೋನಿಕಾ ಸಂಜಯ್, ಶ್ರೀಮತಿ ಸವಿತಾಮೋಹನ್, ಶ್ರೀಮತಿ ಜನಿತ್‌ರಾಯ್, ಸೇರಿದಂತೆ ಶಿಕ್ಷಕರು ವಿದ್ಯಾರ್ಥಿಗಳು ಹಾಗೂ ಪೋಷಕರು ಭಾಗವಹಿಸಿದ್ದರು.

ಎಸ್.ಎಸ್.ಎಲ್.ಸಿ ಯಲ್ಲಿ ಅತೀ ಹೆಚ್ಚು ಅಂಕಗಳನ್ನ ಗಳಿಸಿದ ವಿದ್ಯಾರ್ಥಿಗಳಿಗೆ, ಕ್ರೀಡೆಯಲ್ಲಿ ಹಾಗೂ ಇತರೆ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮದ ನಂತರ ಶಾಲಾ ವಿದ್ಯಾರ್ಥಿ ವಿದ್ಯಾರ್ಥಿನಿಯರು ಆಕರ್ಷಕ ನೃತ್ಯಗಳನ್ನ ನಡೆಸಿಕೊಟ್ಟರು.

### ದೇವಾಲಯ ನಿರ್ಮಾಣಕ್ಕೆ ಜಾಗ ಗುರುತಿಸಿ ಕಟ್ಟಡ ನಿರ್ಮಾಣ ಕಾಮಗಾರಿ ಅರಂಭಿಸಲಾಗಿದೆ



» ಹೊಸದುರ್ಗ

ಭಾವಸಾರಕ್ಷತ್ರೀಯ ಸಮಾಜದ ಕುಲದೇವತೆಯಾದ ಶ್ರೀ ತುಳುಜಾಭವಾನಿ ದೇವಿಯ ದೇವಾಲಯ ನಿರ್ಮಾಣಕ್ಕೆ ಯೋಜಿಸಲಾಗಿದ್ದು. ಸರ್ಕಾರಿ ಆಸ್ಪತ್ರೆಯ ಹಿಂಭಾಗದಲ್ಲಿರುವ ಗುಡ್ಡದ ಮೇಲೆ ದೇವಾಲಯ ನಿರ್ಮಾಣಕ್ಕೆ ಜಾಗ ಗುರುತಿಸಿ ಕಟ್ಟಡ ನಿರ್ಮಾಣ ಕಾಮಗಾರಿ ಅರಂಭಿಸಲಾಗಿದೆ ಎಂದು ಶ್ರೀ ತುಳುಜಾ ಭವಾನಿ ಸೇವಾ ಟ್ರಸ್ಟ್ ಅಧ್ಯಕ್ಷ ಉಮೇಶ್ ಗುಜ್ಜಾರ್ ತಿಳಿಸಿದರು.ಪಟ್ಟಣದ ಗುಡ್ಡದ ಮೇಲಿರುವ ಶ್ರೀ ತುಳುಜಾಭವಾನಿ ಅಮ್ಮನವರ ದೇವಾಲಯದಲ್ಲಿ ಭಾನುವಾರ ಸಂಜೆ ನೆಡೆದ ಕಾರ್ತಿಕ ದೀಪೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಗರ್ಭಗುಡಿ ನಿರ್ಮಾಣದ ನಂತರ ಮುಂದಿನ ಕಾಮಗಾರಿಗಳಿಗೆ ಚಾಲನೆ ನೀಡಲಾಗುವುದು. ದೇವಾಲಯ ನಿರ್ಮಾಣಗೊಳ್ಳುತ್ತಿರುವ ಸ್ಥಳವನ್ನು ಸರ್ಕಾರ ಭಾವಸಾರ ಕ್ಷತ್ರಿಯ ಸಮಾಜಕ್ಕೆ ನೀಡುವ ಜೊತೆಗೆ ದೇವಾಲಯ ನಿರ್ಮಾಣಕ್ಕೆ ಅಗತ್ಯ ಅನುಧಾನ ಒದಗಿಸಬೇಕು. ಆರ್ಥಿಕವಾಗಿ ಹಿಂದುಳಿದಿರುವ ಸಮಾಜಕ್ಕೆ ಸರ್ಕಾರ ಹೆಚ್ಚಿನ ಸೌಲಭ್ಯಗಳನ್ನು ಒದಗಿಸಬೇಕು. ಈ ಕುರಿತು ಶಾಸಕರಿಗೆ ಮನವಿ ಸಲ್ಲಿಸಲಾಗುವುದು ಎಂದರು.ಕಾರ್ತಿಕ ದೀಪೋತ್ಸವ ಕಾರ್ಯಕ್ರಮದ ಆಂಗವಾಗಿ ದೇವಾಲಯದಲ್ಲಿ ವಿಶೇಷ ಪೂಜಾ ಕಾರ್ಯಕ್ರಮಗಳು ನೆರವೇರಿದವು. ತುಳುಜಾಭವಾನಿ ಅಮ್ಮನವರಿಗೆ ಕುಂಕುಮಾರ್ಚನೆ, ಅಷ್ಟೋತ್ತರ, ಮಹಾಮಂಗಳಾರತಿ ಸೇವೆಗಳು ನೆರವೇರಿದವು. ಭಕ್ತರು ಧಾರ್ಮಿಕ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಪೂಜೆ ಸಲ್ಲಿಸಿದರು.ಅಖಿಲ ಬಾರತ ಭಾವಸಾರ ಮಹಾಸಭಾದ ರಾಷ್ಟ್ರೀಯ ಉಪಾಧ್ಯಕ್ಷ ಉಮೇಶ್ ಗುಜ್ಜಾರ್ ದೀಪ ಬೆಳಗಿಸುವ ಮೂಲಕ ದೀಪೋತ್ಸವಕ್ಕೆ ಚಾಲನೆ ನೀಡಿದರು. ಭಾವಸಾರ ಕ್ಷತ್ರಿಯ ಸಮಾಜ ಹಾಗೂ ಶ್ರೀ ತುಳುಜಾಭವಾನಿ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಭಕ್ತರು ಪಾಲ್ಗೊಂಡು ದೇವಿಗೆ ದೀಪ ಬೆಳಗಿ ಸಂಭ್ರಮಿಸಿದರು. ದೀಪೋತ್ಸವದ ಆಂಗವಾಗಿ ಅನ್ನದಾಸೋಹ ನೆರವೇರಿತು. ಕಾರ್ಯಕ್ರಮದಲ್ಲಿ ಭಾವಸಾರ ಸಮಾಜದ ಮುಖಂಡರಾದ ಮೋಹನ್ ಗುಜ್ಜಾರ್, ರವಿ, ರಾಘು, ರಮಣ, ನಾಗರಾಜ್, ಬಾಬುರಾವ್, ಸುನೀಲ್, ರಾಮ್‌ರಾವ್, ವೆಂಕಟೇಶ, ರಂಗನಾಥ್‌ಜಿಂಗಾಡೆ,ಶ್ವೇತ,ಮುಕುಂದರಾವ್,ಚೇತನ್,ಶಾಂತಕುಮರ್, ಮಂಜುನಾಥ್, ತುಕಾರಾಮ್, ಗಂಗಾಧರ್, ಗಣೇಶ್‌ಮಾಳತ್ಕರ್, ಸುದೀಂದ್ರ, ರಾಮಚಂದ್ರ ಸೇರಿದಂತೆ ಮತ್ತಿತರಿದ್ದರು.

### ಶ್ರೀಬಂಡೆಬಸವೇಶ್ವರಸ್ವಾಮಿ ಕಾರ್ತಿಕೋತ್ಸವ ಹಾಗೂ ರಥೋತ್ಸವ 28, 29ರಂದು

**ಚಳ್ಳಕೆರೆ:** ತಾಲ್ಲೂಕಿನ ತಳಕು ಹೋಬಳಿಯ ಕಾಲುವೇಹಳ್ಳಿ ಗ್ರಾಮದಲ್ಲಿ ಡಿ.28 ಮತ್ತು 29 ಎರಡು ದಿನಗಳ ಕಾಲ ಪುರಾತನ ಶ್ರೀಬಂಡೆಬಸವೇಶ್ವರಸ್ವಾಮಿ ಕಾರ್ತಿಕೋತ್ಸವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ದೇವಸ್ಥಾನದ ಆಡಳಿ ಮಂಡಳಿ ತಿಳಿಸಿದೆ. ಈ ಬಗ್ಗೆ ಮಾಹಿತಿ ನೀಡಿದ ಅವರು, ಸಾವಿರಾರು ವರ್ಷಗಳ ಹಿಂದೆ ಈ ಭಾಗದ ಜನರ ಕಷ್ಟವನ್ನು ನಿವಾರಿಸಲು ಬಂದ ಶಿವ ಈ ಗ್ರಾಮದ ಬಂಡೆಯ ಮೇಲೆ ನೆಲೆಸಿದ್ದರಿಂದ ಬಂಡೆಬಸವೇಶ್ವರ ಎಂಬ ಹೆಸರಿನಿಂದ ಈ ಭಾಗದ ಜನರ ಕಷ್ಟಗಳನ್ನು ನಿವಾರಿಸುತ್ತಾ ಬಂದಿದ್ದಾರೆ. ಕರ್ನಾಟಕವಲ್ಲದೆ, ಆಂಧ್ರ ಪ್ರದೇಶಲ್ಲೂ ಈ ದೇವರ ಭಕ್ತರು ಸಹಸ್ರಾರು ಸಂಖ್ಯೆಯಲ್ಲಿ ಇರುವುದು ವಿಶೇಷ.

ಡಿ.28ರ ಶನಿವಾರ ಬೆಳಗ್ಗೆ 8.30ಕ್ಕೆ ಗಂಗಾಪೂಜೆಯೊಂದಿಗೆ ಕಾರ್ಯಕ್ರಮ ಆರಂಭವಾಗಲಿದ್ದು, 10.45ಕ್ಕೆ ಮಹಾರುದ್ರಾಭಿಷೇಕ, ಸಂಜೆ 4.30ಕ್ಕೆ ಅಖಂಡ ಭಜನೆ, ಕೋಲಾಟ, ನಂದಿಧ್ವಜಕುಣಿತ ಮುಂತಾದ ಕಾರ್ಯಕ್ರಮವಿರುತ್ತದೆ. ವಿಶೇಷವಾಗಿ ಅನುರಾಧ ನಕ್ಷತ್ರದಲ್ಲಿ ಗೋದೂಳಿಸಂಜೆ 5ರಿಂದ6 ವೇಳೆಯಲ್ಲಿ ಶ್ರೀಸ್ವಾಮಿಯ ಭವ್ಯರಥೋತ್ಸವ ನಡೆಯಲಿದೆ.

## ಪ್ರಮುಖ ಸುದ್ದಿ

### ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿಯ 4ನೇ ತ್ರೈಮಾಸಿಕ ಸಭೆ

# 2024ರಲ್ಲಿ 60 ಪ್ರಕರಣ, 124 ಸಂತ್ರಸ್ಥರಿಗೆ ಪರಿಹಾರ

» ದಾವಣಗೆರೆ



ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ವರ್ಗದವರ ಮೇಲೆ ನಡೆಯುವ ದೌರ್ಜನ್ಯ ಪ್ರಕರಣಗಳ ತಡೆಗೆ ತ್ವರಿತ ಕ್ರಮದ ಜೊತೆಗೆ ಸರ್ಕಾರದಿಂದ ದೊರಕುವ ಸೌಲಭ್ಯಗಳನ್ನು ಸಕಾಲದಲ್ಲಿ ತಲುಪಿಸಬೇಕೆಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ. ತಿಳಿಸಿದರು.

ಅವರು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಏರ್ಪಡಿಸಲಾದ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿಯ 4ನೇ ತ್ರೈಮಾಸಿಕ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. 2024 ರ ಜನವರಿಯಿಂದ ಇಲ್ಲಿಯವರೆಗೆ 60 ಪ್ರಕರಣಗಳು ದಾಖಲಾಗಿವೆ. ಇದರಲ್ಲಿ 3 ಕೊಲೆ, 8 ಅತ್ಯಾಚಾರ, 49 ಇತರೆ ದೌರ್ಜನ್ಯ ಪ್ರಕರಣಗಳು ಸೇರಿವೆ. ಇದರಲ್ಲಿ 28 ಕ್ಕೆ ಚಾರ್ಜ್‌ಶೀಟ್ ಸಲ್ಲಿಕೆಯಾಗಿದ್ದು ಎಫ್‌ಐಆರ್ ಹಂತದಲ್ಲಿ ರೂ.39.70 ಲಕ್ಷ, ಚಾರ್ಜ್‌ಶೀಟ್ ಹಂತದಲ್ಲಿ ರೂ.79.88 ಲಕ್ಷ ಸೇರಿ ರೂ.1.19 ಕೋಟಿ ಪರಿಹಾರ ನೀಡಲಾಗಿದೆ. ಇದರಲ್ಲಿ ಪರಿಶಿಷ್ಠ ಜಾತಿಯ 68 ಹಾಗೂ ಪ.ಪಂಗಡದ 56 ಸಂತ್ರಸ್ಥರು ಸೇರಿದಂತೆ 124 ಜನರಿಗೆ ಪರಿಹಾರ ನೀಡಲಾಗಿದೆ ಎಂದರು.

ಸಮಿತಿ ಸದಸ್ಯರು ಪ್ರಸ್ತಾಪಿಸಿ ಊರು ಮತ್ತು ಹಾಸ್ಟೆಲ್‌ನಿಂದ ಶಾಲಾ, ಕಾಲೇಜುಗಳಿಗೆ ಬರಲು ವಿದ್ಯಾರ್ಥಿಗಳಿಗೆ ಬಸ್‌ಗಳ ಸಮಸ್ಯೆಯಾಗುತ್ತಿದೆ ಎಂದಾಗ ಮುಂದಿನ 2,3 ತಿಂಗಳಲ್ಲಿ ನಿಗಮಕ್ಕೆ ಹೊಸ ಬಸ್‌ಗಳು ಬರುವ ನಿರೀಕ್ಷೆ ಇದ್ದು, ನಂತರ ವಿದ್ಯಾರ್ಥಿಗಳ ಕಾಲೇಜ್ ಹಾಗೂ ಹಾಸ್ಟೆಲ್‌ಗಳಿಗೆ ಹೋಗುವುದಕ್ಕೆ ಹೆಚ್ಚಿನ ಗಮನ ವಹಿಸಿ ಅನುಕೂಲ ಮಾಡಲಾಗುವುದು ಎಂದು ತಿಳಿಸಿದರು.

ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದವರಿಗಾಗಿಯೇ ಸರ್ಕಾರ ಜಾರಿಗೊಳಿಸಿರುವ ಹಲವಾರು ಯೋಜನೆಯ ಸವಲತ್ತುಗಳ ಬಗ್ಗೆ ಸಮುದಾಯದಲ್ಲಿ ಅರಿವು ಮೂಡಿಸಿ, ಯೋಜನೆಯ ಸೌಲಭ್ಯವನ್ನು ಅರ್ಹರಿಗೆ ತಲುಪಿಸುವ ಕಾರ್ಯವನ್ನು ಸಮಿತಿಯ ಸದಸ್ಯರು ಪ್ರಾಮಾಣಿಕವಾಗಿ ಮಾಡಲು ಮುಂದಾಗಬೇಕು. ನಿಜವಾಗಿ ದೌರ್ಜನ್ಯಕ್ಕೆ ಒಳಗಾಗುತ್ತಿರುವವರನ್ನು ಗುರುತಿಸಿ, ಅವರಿಗೆ ಪರಿಹಾರ ಹಾಗೂ ಸೌಲಭ್ಯ ತಲುಪಿಸಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್, ಹೆಚ್ಚುವರಿ ಪೊಲೀಸ್ ಅಧೀಕ್ಷಕ ವಿಜಯ್‌ಕುಮಾರ್ ಎಂ ಸಂತೋಷ್, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ನಾಗರಾಜ್, ನಾಮ ನಿರ್ದೇಶಿತ ಸದಸ್ಯರಾದ ಅಣಜಿ ಅಂಜಿನಪ್ಪ, ಕುಂದವಾಡ ಮಂಜುನಾಥ ಹಾಗೂ ಇನ್ನಿತರರು ಇದ್ದರು.

## ಫಾಸ್ಟ್ ನ್ಯೂಸ್

### ಮೀನುಗಾರಿಕೆ ಸಲಕರಣೆ ವಿತರಿಸಲು ಅರ್ಜಿ

» ದಾವಣಗೆರೆ

ಪ್ರಸಕ್ತ ಸಾಲಿನಲ್ಲಿ ಒಳನಾಡು ಮೀನುಗಾರಿಕೆ ಅಭಿವೃದ್ಧಿ ಸಹಾಯ ಯೋಜನೆಯಡಿ ವಿ.ಫ. ಯೋ, ಪರಿಶಿಷ್ಟ ಜಾತಿ ಉಪಯೋಜನೆಯಡಿ ಮೀನುಗಾರಿಕೆ ಸಲಕರಣೆ ಕಿಟ್, ಫೈಬರ್ ಗ್ಲಾಸ್ ಹರಿಗೋಲು ಸಾಮಗ್ರಿಗಳನ್ನು ವಿತರಿಸಲು ಅರ್ಜಿ ಆಹ್ವಾನಿಸಲಾಗಿದೆ. ಡಿ.31 ಕೊನೆಯ ದಿನವಾಗಿದ್ದು ಹೆಚ್ಚಿನ ಮಾಹಿತಿಗೆ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿ, ದಾವಣಗೆರೆ ತಾಲ್ಲೂಕು ಇವರನ್ನು ಸಂಪರ್ಕಿಸಲು ತಿಳಿಸಲಾಗಿದೆ.

### ದಾವಣಗೆರೆ ವಿವಿ ಎಂಬಿಎ, ಎಂಸಿಎ ಪ್ರವೇಶಕ್ಕೆ ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನ

» ದಾವಣಗೆರೆ

ಪ್ರಸಕ್ತ ಶೈಕ್ಷಣಿಕ ಸಾಲಿನ ಸ್ನಾತಕೋತ್ತರ ಎಂ.ಬಿ.ಎ, ಎಂ.ಸಿ.ಎ ಕೋರ್ಸ್‌ಗಳಲ್ಲಿ ಖಾಲಿ ಉಳಿದ ಸೀಟುಗಳಿಗೆ ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ವಿದ್ಯಾರ್ಥಿಗಳು ಡಿ.24 ರೊಳಗೆ ಅರ್ಜಿಯನ್ನು ವಿಶ್ವವಿದ್ಯಾನಿಲಯದ ವೆಬ್‌ಸೈಟ್ www.davangereuniversity.ac.in ಮೂಲಕ ಡೌನ್‌ಲೋಡ್ ಮಾಡಿಕೊಂಡು ಆಫ್‌ಲೈನ್ ಮೂಲಕ ಕಚೇರಿಗೆ ಸಲ್ಲಿಸಬೇಕು. ಅರ್ಜಿ ಶುಲ್ಕವನ್ನು ವಿಶ್ವವಿದ್ಯಾನಿಲಯದ ಹಣಕಾಸು ಅಧಿಕಾರಿಗಳು, ಖಾತೆ ಸಂ:40619101261(ಐಈಖಅ ಕೋಡ್ ಖಃಐಓ0040869) ಸಂದಾಯವಾಗುವಂತೆ ಪಾವತಿಸಬೇಕು. ಅಥವಾ ಹಣಕಾಸು ಅಧಿಕಾರಿಗಳು, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ ಇವರ ಹೆಸರಿನಲ್ಲಿ ಡಿ.ಡಿ. ಮೂಲಕ ಪಾವತಿಸಬೇಕು. ಹೆಚ್ಚಿನ ಮಾಹಿತಿಗಾಗಿ ವಿ.ವಿ.ವೆಬ್‌ಸೈಟ್ ವೀಕ್ಷಿಸಲು ವಿಶ್ವವಿದ್ಯಾನಿಲಯದ ಕುಲಸಚಿವರು ತಿಳಿಸಿದ್ದಾರೆ.

### ಹಾಡುಹಗಲೇ ಸಾರ್ವಜನಿಕ ರಸ್ತೆಯಲ್ಲಿ ಮಟ್ಕಾ: ಇಬ್ಬರ ವಿರುದ್ಧ ಪ್ರಕರಣ

» ಚಳ್ಳಕೆರೆ

ನಗರದ ಚಿತ್ರದುರ್ಗ ರಸ್ತೆಯ ಸಾರ್ವಜನಿಕ ಸ್ಥಳದಲ್ಲಿ ಕಾನೂನು ಬಾಹಿರವಾಗಿ ಮಟ್ಕಾವಾಡುತ್ತಿದ್ದ ಇಬ್ಬರನ್ನು ವಶಕ್ಕೆ ಪಡೆದ ಪೊಲೀಸರು ವಶಕ್ಕೆ ಪಡೆದು ಪ್ರಕರಣ ದಾಖಲಿಸಿದ್ಧಾರೆ. ಪಿಎಸ್‌ಐ ಧರೆಪ್ಪಬಾಳಪ್ಪದೊಡ್ಡಮನಿ ಈ ಬಗ್ಗೆ ಮಾಹಿತಿ ನೀಡಿ, ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಪೇದೆ ರಮೇಶ್‌ಬಾರ್ಕಿ ಮತ್ತು ಸಿಬ್ಬಂದಿ ವರ್ಗ ಸಾರ್ವಜನಿಕರ ಮಾಹಿತಿ ಮೇರೆಗೆ ಚಿತ್ರದುರ್ಗ ರಸ್ತೆಯ ಸಾರ್ವಜನಿಕ ಸ್ಥಳದಲ್ಲಿ ಹಾಡುಹಗಲೇ ಮಟ್ಕಾ ಚೀಟಿ ಬರೆಯುತ್ತಿದ್ದ ಗಾಂಧಿನಗರ ಶ್ರೀಮೂರ್ತಿ(45),ಚಿತ್ರದುರ್ಗದ ಪರಶುರಾಮ(25) ಇವರನ್ನು ವಶಕ್ಕೆ ಪಡೆದು ಪರಿಶೀಲನೆ ನಡೆಸಿದಾಗ ಮಟ್ಕಾ ಚೀಟಿ ಹಾಗೂ 2640 ನಗದು ಹಣ ದೊರಕಿದ್ದು ಇವರ ವಿರುದ್ಧ ಪ್ರಕರಣ ದಾಖಲು ಮಾಡಲಾಗಿದೆ.

### ವಲಸೆ ಗ್ರಾಮದಲ್ಲಿ ಶ್ರೀವೀರಭದ್ರಸ್ವಾಮಿ ಕಾರ್ತಿಕೋತ್ಸವ ಯಶಸ್ವಿ



» ಚಳ್ಳಕೆರೆ

ತಾಲ್ಲೂಕಿನ ತಳಕು ಹೋಬಳಿಯ ವಲಸೆ ಗ್ರಾಮದಲ್ಲಿ ಪ್ರತಿವರ್ಷದಂತೆ ಈ ವರ್ಷವೂ ಶ್ರೀವೀರಭದ್ರಸ್ವಾಮಿ ಕಾರ್ತಿಕೋತ್ಸವ ಭಕ್ತಿ, ಶ್ರದ್ಧೆಯಿಂದ ಆಚರಿಸಲಾಯಿತು. ದೇವಸ್ಥಾನದಲ್ಲಿ ಬೆಳಗಿನಿಂದಲೇ ಪೂಜಾವಿಧಿವಿಧಾನಗಳು ಸಂಭ್ರಮದಿಂದ ನಡೆಸಲಾಯಿತು. ಪುರಂತಪ ಈ ಬಾರಿಯೂ ಸಹ ಶ್ರೀವೀರಭದ್ರಸ್ವಾಮಿಯ ಲೀಲೆಗಳ ಬಗ್ಗೆ ದಾರಿಯುದ್ದಕ್ಕೂ ವಿವರಣೆ ನೀಡುತ್ತಾ ವೀರನಾಟ್ಯದೊಂದಿಗೆ ಹೆಜ್ಜೆ ಹಾಕಿದರು. ಗಂಗಾಪೂಜೆಯಲ್ಲಿ ನೂರಾರು ಜನರು ಪಾಲ್ಗೊಂಡಿದ್ದರು. ರಥೋತ್ಸವಕ್ಕೂ ಮುನ್ನ ಮೆರವಣಿಗೆ ನಡೆಸಿ ಅಗ್ನಿಕುಂಡ ಕಾರ್ಯಕ್ರಮದ ನಂತರ ಮುಕ್ತಿಬಾವುಟ ಹರಾಜು ಮಾಡಲಾಗಿ ಗ್ರಾಮದ ರಾಜುನಾಯ್ಕ ಎಂಬುವವರು 50001ರೂಗೆ ಮುಕ್ತಿಬಾವುಟ ಪಡೆದುಕೊಂಡರು. ಮೆರವಣಿಗೆಯಲ್ಲಿ ವೀರಗಾಸೆ, ಕರಡಿಸಮಾಳ, ನಂದಿಕೋಲು ಕುಣಿತ, ಗೊಂಬೆ ಕುಣಿತ ಜನರ ಮನಸೆಳೆದವು. ಕಾರ್ತಿಕೋತ್ಸವ ಕಾರ್ಯಕ್ರಮಕ್ಕೆ ಪಾಲ್ಗೊಂಡ ಭಕ್ತರಿಗೆ ದೇವಸ್ಥಾನದ ಆಡಳಿತ ಮಂಡಳಿ ಪ್ರಸಾದದ ವ್ಯವಸ್ಥೆ ಮಾಡಿದ್ದರು.

**ಪ.ಜಾತಿ, ಪ.ಪಂಗಡ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷರಿಂದ ಪ್ರಗತಿ ಪರಿಶೀಲನೆ**

# ಗುರಿಯಷ್ಟು ಸಾಧನೆ ಕೊರತೆ, ಜನರಿಗೆ ಯೋಜನೆ ತಲುಪಿಸಲು ಜಾಗೃತಿಗೆ ಕ್ರಮ; ಪಲ್ಲವಿ.ಜಿ

» ದಾವಣಗೆರೆ

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದಲ್ಲಿನ ಅಲೆಮಾರಿ ಜನರ ಅಭಿವೃದ್ದಿಗಾಗಿ ಸರ್ಕಾರ ಪ್ರತ್ಯೇಕ ನಿಗಮ ಸ್ಥಾಪಿಸಿ ಯೋಜನೆಗಳನ್ನು ಜನರಿಗೆ ತಲುಪಿಸುವ ಕೆಲಸ ಮಾಡುತ್ತಿದ್ದು ಗುರಿಯಷ್ಟು ಸಾಧನೆಯಾಗದಿರುವುದರಿಂದ ಈ ಜನರಲ್ಲಿ ಇನ್ನಷ್ಟು ಜಾಗೃತಿ ಮೂಡಿಸುವ ಅಗತ್ಯವಿದೆ ಎಂದು ರಾಜ್ಯ ಪ.ಜಾತಿ ಹಾಗೂ ಪ.ಪಂಗಡಗಳ ಅಲೆಮಾರಿ ಅಭಿವೃದ್ದಿ ನಿಗಮದ ಅಧ್ಯಕ್ಷೆ ಪಲ್ಲವಿ.ಜಿ ತಿಳಿಸಿದರು.

ಅವರು ಸೋಮವಾರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು, ತಹಶೀಲ್ದಾರರೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು. ಪ.ಜಾತಿ ಹಾಗೂ ಪ.ಪಂಗಡಕ್ಕೆ ಸೇರಿದ್ದರೂ ಸಹ ಈ ಜನರನ್ನು ಗುರುತಿಸಲು ಸಾಧ್ಯವಾಗದಿರುವುದನ್ನು ಸರ್ಕಾರ ಮನಗಂಡು ಸಮಾಜ ಕಲ್ಯಾಣ ಇಲಾಖೆಯಡಿ ಅಭಿವೃದ್ದಿ ನಿಗಮ ಸ್ಥಾಪಿಸಿ ಅನುಷ್ಠಾನ ಮಾಡಲಾಗುತ್ತಿದೆ ಎಂದರು.

2011 ರ ಜನಗಣತಿಯನ್ವಯ ರಾಜ್ಯದಲ್ಲಿ ಪರಿಶಿಷ್ಟಜಾತಿಯ ಅಲೆಮಾರಿಗಳು 665217 ಮತ್ತು ಪರಿಶಿಷ್ಟ ಪಂಗಡದ 321681 ಮತ್ತು 122388 ಜನಸಂಖ್ಯೆ ಇರುವ 25 ಆದಿವಾಸಿ ಸಮುದಾಯಗಳು ಈ ನಿಗಮದ ವ್ಯಾಪ್ತಿಯಲ್ಲಿ ಬರಲಿವೆ. ಈ ಜನರನ್ನು ಗುರುತಿಸದೇ ಇರುವುದರಿಂದ ಇವರು ಶಿಕ್ಷಣ, ಆರ್ಥಿಕ, ಸಾಮಾಜಿಕತೆಯಿಂದ ದೂರ ಉಳಿಯುವಂತಾಗಿದೆ. ಇನ್ನೂ ಸಹ ಅಲೆಮಾರಿಗಳಂತೆ ಜೀವನ ನಡೆಸುತ್ತಿದ್ದಾರೆ. ನಿಗಮದ ಅಧ್ಯಕ್ಷಳಾಗಿ ರಾಜ್ಯದ ಹಲವು ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು ಅಲೆಮಾರಿಗಳ ಬದುಕನ್ನು ಕಣ್ಣಾರೆ ಪರಿಶೀಲಿಸಲಾಗಿದೆ. ದಾವಣಗೆರೆ ಜಿಲ್ಲೆಯಲ್ಲಿ ಕಳೆದ ಮೂರು ದಿನಗಳಿಂದ



ಎಲ್ಲಾ ತಾಲ್ಲೂಕುಗಳಲ್ಲಿ ಪ್ರವಾಸ ಕೈಗೊಂಡು ಅಲೆಮಾರಿಗಳ ಕುಂದುಕೊರತೆಗಳ ಅಹವಾಲುಗಳನ್ನು ಸ್ವೀಕರಿಸಲಾಗಿದೆ ಎಂದರು.

ಜಿಲ್ಲಾ ಮಟ್ಟದಲ್ಲಿ ನಿಗಮದ ಸೌಲಭ್ಯ, ಯೋಜನೆಗಳ ಅನುಷ್ಠಾನಕ್ಕಾಗಿ ಜಿಲ್ಲಾಧಿಕಾರಿಯವರ ಅಧ್ಯಕ್ಷತೆಯಲ್ಲಿ ಸಮಿತಿ ಇದ್ದು ಅಧಿಕಾರೇತರ ಐವರು ಸದಸ್ಯರನ್ನು ಅಲೆಮಾರಿ ಜಾತಿಗಳಲ್ಲಿಯೇ ಸರದಿಯನ್ವಯ ಪ್ರತಿ ಎರಡು ವರ್ಷಕ್ಕೊಮ್ಮೆ ನೇಮಕ ಮಾಡಲಾಗುತ್ತಿದೆ. ಕಳೆದ ಮೂರು ವರ್ಷಗಳಲ್ಲಿ ಗುರಿಯಂತೆ ಪ್ರಗತಿಯಾಗಿರುವುದಿಲ್ಲ. ಜೊತೆಗೆ ಈ ಜನರಿಗೂ ಸಹ ಯೋಜನೆಗಳ ಅರಿವು ಇಲ್ಲದ ಕಾರಣ ಪರಿಣಾಮಕಾರಿ ಅನುಷ್ಠಾನ ಸಾಧ್ಯವಾಗಿರುವುದಿಲ್ಲ.ಮುಂದಿನದಿನಗಳಲ್ಲಿ ಜನರನ್ನು ಹೆಚ್ಚು ಜಾಗೃತರನ್ನಾಗಿಸುವ ಮೂಲಕ ಹೆಚ್ಚು ಸೌಲಭ್ಯಗಳನ್ನು ಕಲ್ಪಿಸಲು ಕ್ರಮ ವಹಿಸಲಾಗುತ್ತದೆ ಎಂದರು.

ನಿವೇಶನ ಹಂಚಿಕೆಗೆ ಆದೇಶ; ಅಲೆಮಾರಿಗಳಿಗೆ ಸೂರು ಇಲ್ಲದ ಕಾರಣ ರಾಜ್ಯದಲ್ಲಿ ವಸತಿ ನಿಗಮದ ಮೂಲಕ ರೂ.200 ಕೋಟಿ ವಸತಿ ಯೋಜನೆಗಾಗಿ ಬಿಡುಗಡೆ ಮಾಡಲಾಗಿತ್ತು. ಅದರಲ್ಲಿ ಅನುಷ್ಠಾನವಾಗದ ಕಾರಣ 112 ಕೋಟಿ ಹಿಂಪಡೆಯಲಾಗಿದೆ. 2016 ರಲ್ಲಿ ವಸತಿ ರಹಿತರಿಗೆ ಸರ್ಕಾರಿ ಜಾಗದಲ್ಲಿ ಅಥವಾ ಖಾಸಗಿ ಜಾಗವನ್ನು ಪಡೆದು ನಿವೇಶನ ಅಭಿವೃದ್ಧಿ ಮಾಡುವ ಮೂಲಕ ನಿವೇಶನ ರಹಿತ ಅಲೆಮಾರಿಗಳಿಗೆ ನಿವೇಶನ ಹಂಚಿಕೆ ಮಾಡಬೇಕೆಂದು ನಿರ್ದೇಶನ ನೀಡಲಾಗಿದೆ. ನಿವೇಶನ ರಹಿತರು ಜಿಲ್ಲೆಯಲ್ಲಿ ಸಾಕಷ್ಟು ಜನರಿದ್ದು ಗ್ರಾಮೀಣ ಭಾಗದಲ್ಲಿ ಅಂಗನವಾಡಿ ಕಾರ್ಯಕರ್ತೆಯರ ಮೂಲಕ ಹಾಗೂ ಸ್ಥಳೀಯ ಸಂಸ್ಥೆಯಗಳ ವ್ಯಾಪ್ತಿಯಲ್ಲಿಯು ಸಮೀಕ್ಷೆ ಮಾಡಿ ನಿವೇಶನ, ವಸತಿ ಒದಗಿಸಲು ಕ್ರಮ ಕೈಗೊಳ್ಳಲಾಗುತ್ತದೆ ಎಂದರು.

ಸೌಲಭ್ಯಗಳು; ನಿಗಮದಿಂದ ಅಲೆಮಾರಿ ಜನಾಂಗದವರಿಗೆ ಸ್ವಯಂ ಉದ್ಯೋಗ ನೇರ ಸಾಲ ಯೋಜನೆ, ಉದ್ಯಮಶೀಲತಾ ಅಭಿವೃದ್ಧಿ ಯೋಜನೆ, ಸ್ವಾವಲಂಭಿ ಸಾರಥಿ, ಮೈಕ್ರೋಕ್ರೆಡಿಟ್ ಯೋಜನೆ, ಭೂ ಒಡೆತನ, ಗಂಗಾ ಕಲ್ಯಾಣ ಸೇರಿದಂತೆ ಕೌಶಲ್ಯಾಭಿವೃದ್ಧಿ ತರಬೇತಿಯನ್ನು ನೀಡಲಾಗುತ್ತದೆ. ಈ ವರ್ಷ ಪ.ಜಾತಿ ಅಲೆಮಾರಿಯವರಿಗೆ ಜಿಲ್ಲೆಯಲ್ಲಿ 79 ಭೌತಿಕ ಗುರಿ ಇದ್ದು ರೂ.1.16 ಕೋಟಿ ಆರ್ಥಿಕ ಗುರಿ ಹೊಂದಲಾಗಿದೆ. ಪ.ಪಂಗಡದ ಅಲೆಮಾರಿ ಯೋಜನೆಯಡಿ 12 ಭೌತಿಕ ಗುರಿಗೆ ರೂ.23.50 ಲಕ್ಷ ಆರ್ಥಿಕ ಗುರಿ ಹೊಂದಲಾಗಿದೆ. ಆದಷ್ಟು ಬೇಗ ಫಲಾನುಭವಿಗಳ ಆಯ್ಕೆ ಮಾಡಿ ಅನುಷ್ಠಾನ ಮಾಡಲು ಅಧಿಕಾರಿಗಳು ಕಾರ್ಯೋನ್ಮುಖರಾಗಿದ್ದಾರೆ. ಈ ಜನರು ಅನಕ್ಷರಸ್ಥರಾದ ಕಾರಣ ಯೋಜನೆಗಳನ್ನು ಬಳಸಿಕೊಳ್ಳಲು ಮುಂದೆ ಬರಲು ಸಾಧ್ಯವಾಗುತ್ತಿಲ್ಲ, ಅದಕ್ಕಾಗಿ ರಾಜ್ಯಾದ್ಯಂತ ಪ್ರವಾಸ ಕೈಗೊಂಡು ಜನರಲ್ಲಿ ಜಾಗೃತಿ ಮೂಡಿಸುವ ಕೆಲಸ ಮಾಡಲಾಗುತ್ತಿದೆ ಎಂದರು.

ವಸತಿ ಶಾಲೆಗಳಲ್ಲಿ ಶೇ 10 ರಷ್ಟು ಪ್ರವೇಶ; ವಸತಿ ಶಿಕ್ಷಣ ಸಂಸ್ಥೆಗಳ ಮೂಲಕ ನಡೆಸುತ್ತಿರುವ ವಸತಿ ಶಾಲೆಗಳಲ್ಲಿ ಅಲೆಮಾರಿ ವಿದ್ಯಾರ್ಥಿಗಳಿಗೆ ಶೇ 10 ರಷ್ಟು ಮೀಸಲಿರಿಸಿ ಪ್ರವೇಶ ಕಲ್ಪಿಸಲು ಆದೇಶವಿದ್ದು ಜನರಿಗೆ ಮಾಹಿತಿ ಕೊರತೆಯ ಕಾರಣ 110 ವಿದ್ಯಾರ್ಥಿಗಳಿಗೆ ಅವಕಾಶ ಇದ್ದರೂ 40 ವಿದ್ಯಾರ್ಥಿಗಳು ಮಾತ್ರ ಪ್ರವೇಶ ಪಡೆದಿದ್ದಾರೆ ಎಂದರು.

ಪ್ರವಾಸದ ವಿವರ; ಸವಳಂಗದಲ್ಲಿ ಶಿಳ್ಳೆಕ್ಯಾತ ಮತ್ತು ಕೊರಚ ಜನಾಂಗದವರಿಗೆ ನಿವೇಶನದ ಬೇಡಿಕೆ ಮತ್ತು ಸ್ಮಶಾನದ ಹದ್ದುಬಸ್ತು ಮಾಡಿಕೊಡಬೇಕೆಂದು, ಹೊನ್ನಾಳಿಯಲ್ಲಿ ಮೇದಾರರು ಇದ್ದು ಬಾಡಿಗೆ ಮನೆಯಲ್ಲಿದ್ದಾರೆ. ಇವರು ಬುಟ್ಟಿ ಹೆಣೆಯುವ ಕೆಲಸ ಮಾಡುತ್ತಿದ್ದು ಇನ್ನೂ ಬಾಡಿಗೆ ಮನೆಯಲ್ಲಿದ್ದಾರೆ. ತುಂಗಾ ನದಿ ತೀರದಲ್ಲಿದ್ದು ಮಳೆಗಾಲದಲ್ಲಿ ಪ್ರವಾಹ ಬಂತೆಂದರೆ ಕಾಳಜಿ ಕೇಂದ್ರಕ್ಕೆ ಸ್ಥಳಾಂತರವಾಗಬೇಕಾಗುತ್ತದೆ. ಚನ್ನದಾಸರು, ಅಸ್ತಾಪನಹಳ್ಳಿಯಲ್ಲಿ ಹಕ್ಕಿಪಿಕ್ಕಿ ಜನಾಂಗದವರು ವಾಸಿಸುತ್ತಿದ್ದು ಇಲ್ಲಿ ಆಶ್ರಮ ಶಾಲೆ ಚನ್ನಾಗಿ ನಡೆಯುತ್ತಿದೆ. ಸಂತೆಬೆನ್ನೂರು ಗ್ರಾಮದಲ್ಲಿ ಕೊರಚ ಸಮುದಾಯ ಇದ್ದು ಶಾಲೆಗೆ ದಾಸೋಹ ಕೊಠಡಿ,ಸಮುದಾಯ ಭವನ ನಿರ್ಮಾಣದ ಬೇಡಿಕೆ, ಜಗಳೂರು ಪಟ್ಟಣದಲ್ಲಿ 40 ಕುಟುಂಬಗಳು ವಾಣಿಜ್ಯ ಮಳಿಗೆಯಲ್ಲಿ ವಾಸಿಸುತ್ತಿದ್ದು ಅವರಿಗೆ ತುರ್ತಾಗಿ ನಿವೇಶನ ನೀಡಿ ಮನೆ ನಿರ್ಮಿಸಿಕೊಡಬೇಕಾಗಿದೆ. ಸಾಸ್ವೆಹಳ್ಳಿ, ಹರಿಹರ, ಹುಚ್ಚವ್ವನಹಳ್ಳಿ ಸೇರಿದಂತೆ ಜಿಲ್ಲೆಯ ಅನೇಕ ಕಡೆ ಪ್ರವಾಸ ಕೈಗೊಂಡಾಗ ಅಲೆಮಾರಿಗಳ ಸಾಕಷ್ಟು ಕುಂದುಕೊರತೆಗಳನ್ನು ಗಮನಿಸಲಾಗಿದ್ದು ಹಂತ ಹಂತವಾಗಿ ಪರಿಹಾರ ಕಂಡುಕೊಳ್ಳಲು ಇಲಾಖೆ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದರು.

ಈ ವೇಳೆ ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ನಾಗರಾಜ್, ಡಿಯುಡಿಸಿ ಯೋಜನಾ ನಿರ್ದೇಶಕ ಡಾ; ಮಹಾಂತೇಶ್, ವಿಶೇಷ ಕರ್ತವ್ಯಾಧಿಕಾರಿ ಬಿ.ಎಸ್.ಆನಂದಕುಮಾರ್ ಉಪಸ್ಥಿತರಿದ್ದರು.

# ಅಂಬೇಡ್ಕರ್‌ಗೆ ಅವಮಾನ: ಕೇಂದ್ರ ಗೃಹ ಸಚಿವ ಅಮಿತ್‌ಶಾ ರಾಜೀನಾಮೆ ನೀಡಲಿ

» ಚಳ್ಳಕೆರೆ

ಇತ್ತೀಚೆಗೆ ನಡೆದ ಲೋಕಸಭಾ ಕಲಾಪದಲ್ಲಿ ಕೇಂದ್ರ ಕೃಷಿ ಸಚಿವ ಅಮಿತ್‌ಶಾ ಅಂಬೇಡ್ಕರ್ ಕುರಿತು ಆಡಿದ ಮಾತುಗಳನ್ನು ವಾಪಾಸ್ ಪಡೆಯಬೇಕು. ಕೇಂದ್ರ ಸರ್ಕಾರ ಅಮಿತ್ ಶಾರವರನ್ನು ಸಂಪುಟದಿಂದ ಕೈಬಿಡಬೇಕು. ಚುನಾಯಿತ ಜನಪ್ರತಿನಿಧಿಗಳಿಗೆ ಸಂವಿಧಾನ ಕಾರ್ಯಚಟುವಟಿಕೆ ಕುರಿತು ತರಬೇತಿ ನೀಡಬೇಕೆಂದು ಭಾರತೀಯ ರಾಷ್ಟ್ರೀಯ ಅಲ್ಪಸಂಖ್ಯಾತ ಕ್ಷೇಮಾಭಿವೃದ್ಧಿ ಸಂಘದ ತಾಲ್ಲೂಕು ಘಟಕ ಮಾನ್ಯ ರಾಷ್ಟ್ರಪತಿಗಳಿಗೆ ಮನವಿ ಅರ್ಪಿಸಿದೆ. ಮನವಿ ಅರ್ಪಿಸುವ ಸಂದರ್ಭದಲ್ಲಿ ಮಾತನಾಡಿದ ಅಲ್ಪಸಂಖ್ಯಾತ ಸಮುದಾಯದ ಹಿರಿಯ ಮುಖಂಡ ಎಸ್.ಎಚ್.ಸೈಯದ್, ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್‌ರವರ ಬಗ್ಗೆ ಲೋಕಸಭಾ ಅಧಿವೇಶನದಲ್ಲೇ ಅವಮಾನಿಸಿದ ಕೇಂದ್ರ ಕೃಷಿ




ಸಚಿವ ಅಮಿತ್‌ಶಾರವರನ್ನು ಮಂತ್ರಿಮಂಡಲದಿಂದ ಕೈಬಿಡಬೇಕು. ಅಂಬೇಡ್ಕರ್‌ವರನ್ನು ಅವಮಾನಿಸಿದ ರೀತಿಯನ್ನು ನೋಡಿದರೆ ಕೇಂದ್ರ ಕೃಷಿ ಸಚಿವರು ಅಂಬೇಡ್ಕರ್ ಬಗ್ಗೆ ಹೆಚ್ಚು ಮಾಹಿತಿ ಪಡೆದಿಲ್ಲವೆನ್ನಿಸುತ್ತದೆ. ಅಂಬೇಡ್ಕರ್ ನಿಂದನೆ ಸಮಸ್ತ ನಾಡಿನ ಜನತೆಗೆ ನೋವುಂಟು ಮಾಡಿದೆ. ಆದ್ದರಿಂದ ಅವರನ್ನು ಕೇಂದ್ರ ಸಂಪುಟದಿಂದ ಕೈಬಿಡಬೇಕೆಂದು ಒತ್ತಾಯಿಸುವುದಾಗಿ ತಿಳಿಸಿದರು.

ಮನವಿ ಸ್ವೀಕರಿಸಿ ಮಾತನಾಡಿದ ತಹಶೀಲ್ಧಾರ್ ರೇಹಾನ್‌ಪಾಷ, ತಮ್ಮ ಮನವಿಯನ್ನು ಮಾನ್ಯ ಜಿಲ್ಲಾಧಿಕಾರಿಗಳ ಮೂಲಕ ರಾಷ್ಟ್ರಪತಿಗಳ ಕಾರ್ಯಾಲಯಕ್ಕೆ ಕಳಿಸುವ ಭರವಸೆ ನೀಡಿದರು. ಅಲ್ಪಸಂಖ್ಯಾತ ಮುಖಂಡ ಎಂ.ದಾದಾಪೀರ್, ಡಿ.ಕೆ. ಅನ್ವರ್‌ಮಾಸ್ಟರ್, ಅಬ್ದುಲ್‌ಕಲೀಲ್, ಭಾಷಸಾಬ್ ಆಪ್ಸರ್, ಎಂ.ಎಸ್. ಇಮ್ರಾನ್ ಮುಂತಾದವರು ಇದ್ದರು.

### ಚೌಳೂರು ಗ್ರಾಮದಲ್ಲಿ ಡಿ.26ರಿಂದ 28 ತನಕ ಶ್ರೀ ವೀರಭದ್ರಸ್ವಾಮಿಯ ಉತ್ಸವ ಜತೆ ರಥೋತ್ಸವ

» ಪರಶುರಾಂಪುರ

ಸಮೀಪದ ಚೌಳೂರು ಗ್ರಾಮದ ಆರಾಧ್ಯ ದೈವ ಶ್ರೀವೀರಭದ್ರಸ್ವಾಮಿ ದೇವರ ಕಡೇಕಾರ್ತಿಕೋತ್ಸವ ಅಂಗವಾಗಿ ರಥೋತ್ಸವ ಹಾಗೂ ತೆಪ್ಪೋತ್ಸವ ಸೇರಿದಂತೆ ಶ್ರೀ ಆಂಜನೇಯಸ್ವಾಮಿ ದೇವಾಲಯದಲ್ಲಿ ವಿಶೇಷ ಪೂಜೆಯೊಂದಿಗೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಡಿ.26 ಗುರುವಾರ ದಿಂದ ಡಿ.28ಶನಿವಾರದ ವರಗೆ ಮೂರು ದಿನಗಳ ಕಾಲ ನಡೆಯುವ ಜಾತ್ರೆಯ ಅಂಗವಾಗಿ ರಥೋತ್ಸವ ಹಾಗೂ ವೇದಾವತಿ ನದಿಗೆ ಅಡ್ಡಲಾಗಿ ನಿರ್ಮಿಸಿರುವ ಬ್ಯಾರೇಜ್ ಬಳಿಯಲ್ಲಿ ತೆಪ್ಪೋತ್ಸವ ನಡೆಸಲು ಸಿದ್ದತೆಗಳು ನಡೆಯುತ್ತಿವೆ .

ಉತ್ಸವದಲ್ಲಿ ಕೀಲು ಕುದುರೆ,ಲಂಬಾಣಿ ನೃತ್ಯ,ಡೊಳ್ಳು ಕುಣಿತ ,ಚಕ್ಕೆ ಭಜನೆ ಸೇರಿದಂತೆ ವಿವಿಧ ಜಾನಪದ ಕಲಾತಂಡ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳೊಂದಿಗೆ ನಡೆಯಿಲಿವೆ. ಜಾತ್ರೆಯ ಪ್ರಯುಕ್ತ ಗ್ರಾಮದ ದೇವಾಲಯ ಸೇರಿದಂತೆ ವಿವಿಧ ಬೀದಿಗಳಿಗೆ ವಿದ್ಯುತ್ ದೀಪ ಅಲಂಕಾರದ ಮೂಲಕ ಸಜ್ಜುಗೊಳ್ಳಲು ಸಿದ್ಧವಾಗಿದೆ.

ಡಿ.26ಗುರುವಾರ ರಂದು ಸ್ವಾಮೀಗೆ ಬೆಳಿಗ್ಗೆ ವೇದಾವತಿನದಿಯಲ್ಲಿ ಗಂಗಾಪೂಜೆ ನಂತರ ರಾತ್ರಿ ದೇವಾಲಯದ ಬಳಿಯಲ್ಲಿ ಕಾರ್ತಿಕೋತ್ಸವ ನಡೆಸಲಾಗುತ್ತದೆ. ಬಳಿಕ ರಥೋತ್ಸವಕ್ಕೆ ಚಾಲನೆ ದೊರೆಯಲಿದೆ. ರಥೋತ್ಸವಕ್ಕೆ ಭಕ್ತಾದಿಗಳು ಹೂವಿನ ಹಾರ ಸಲ್ಲಿಸುವವರು ಬಳಿಕ ರಥೋತ್ಸವಕ್ಕೆ ಚಾಲನೆ ದೊರೆಯಲಿದೆ. ಡಿ.27 ಶುಕ್ರವಾರದಂದು ಬೆಳಿಗ್ಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಶ್ರೀ ಆಂಜನೇಯಸ್ವಾಮಿ ಹಾಗೂ ವೀರಭದ್ರದೇವರ ಅಡ್ಡಪಲ್ಲಕ್ಕಿ ಉತ್ಸವ ನಡೆಸಲಾಗುತ್ತದೆ. ಸಂಜೆ 3 ಗಂಟೆ ಸುಮಾರಿಗೆ ವೇದಾವತಿ ಬ್ಯಾರೇಜ್‌ನಲ್ಲಿ ತೆಪ್ಪೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಸಂಜೆ ಓಕಳಿ ಉತ್ಸವ ಏರ್ಪಡಿಸಲಾಗಿದೆ .

## ಪ್ರಮುಖ ಸುದ್ದಿ

# ಎನ್‌ಎಸ್‌ಎಸ್ ವಿದ್ಯಾರ್ಥಿಗಳಿಂದ ರೈತರ ದಿನಾಚರಣೆ

» ಚಳ್ಳಕೆರೆ

ನಗರದ ಸರ್ಕಾರಿ ಪದವಿಪೂರ್ವ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನಾ ಘಟಕ ರಾಷ್ಟ್ರೀಯ ರೈತ ದಿನಾಚರಣೆ ಅಂಗವಾಗಿ ಕಾಲೇಜಿನ ಒಳ ಆವರಣವನ್ನು ಸ್ವಚ್ಚಗೊಳಿಸುವ ಮೂಲಕ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಿದರು.

ಪ್ರಭಾರ ಪ್ರಾಚಾರ್ಯ ಕೆ.ಎನ್. ವಸಂತಕುಮಾರ್ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡುತ್ತಾ, ವಿದ್ಯಾರ್ಥಿಗಳು ಪ್ರತಿನಿತ್ಯ ಶೈಕ್ಷಣಿಕ ಅಭಿವೃದ್ಧಿ ಕಡೆ ಗಮನ ನೀಡುವುದು ಸಾಮಾನ್ಯ. ಕೆಲವೊಂದು ಸಂದರ್ಭಗಳಲ್ಲಿ ಸೇವಾ ಮನೋಭಾವನೆಯೂ ಸಹ ಬೆಳೆಸಿಕೊಳ್ಳಬೇಕಾಗುತ್ತದೆ. ವಿಶೇಷವಾಗಿ ನಮ್ಮ ಕಾಲೇಜಿನ ಎನ್‌ಎಸ್‌ಎಸ್ ವಿದ್ಯಾರ್ಥಿಗಳು ಸೇವಾಮನೋಭಾವನೆಯಲ್ಲಿ ಮೇಲ್ಪಂಕ್ತಿ



ಸಾಧಿಸಿದ್ದಾರೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಎನ್‌ಎಸ್‌ಎಸ್ ಅಧಿಕಾರಿ ಬಿ.ಶಾಂತಕುಮಾರಿ, ಕಳೆದ ಹಲವಾರು ವರ್ಷಗಳಿಂದ ಕಾಲೇಜಿನ ಎನ್‌ಎಸ್‌ಎಸ್ ಘಟಕ ಹಲವಾರು ವಿನೂತನ ಕಾರ್ಯಕ್ರಮಗಳನ್ನು ನಡೆಸುತ್ತಾ ಬಂದಿದೆ. ಗ್ರಾಮೀಣ ಭಾಗದ ಶಿಬಿರಗಳಲ್ಲಿ ಗ್ರಾಮಸ್ಥರಿಗೆ ಸ್ವಚ್ಚತಾ ಅರಿವು ಮೂಡಿಸುವಲ್ಲಿ ನಮ್ಮ ಹಲವಾರು ತರಬೇತಿ ಶಿಬಿರ ಯಶಸ್ವಿಯಾಗಿವೆ. ರಾಷ್ಟ್ರೀಯ ರೈತ ದಿನಾಚರಣೆ ಅಂಗವಾಗಿ ಕಾಲೇಜಿನ ಎನ್‌ಎಸ್‌ಎಸ್ ಘಟಕದ ವಿದ್ಯಾರ್ಥಿಗಳು ಸ್ವಯಂ ಪ್ರೇರಣೆಯಿಂದ ರೂಪಿಸಿಕೊಂಡಿರುವುದು ಸಂತಸ ತಂದಿದೆ. ನಾಡಿನ ಸಮಸ್ತ ಜನರಿಗೆ ಅನ್ನ ನೀಡುವ ರೈತರ ಶ್ರಮಕ್ಕೆ ಸೂಕ್ತ ಬೆಲೆ, ಗೌರವ ಸಿಗಲಿ ಎಂದು ಈ ಸಂದರ್ಭದಲ್ಲಿ ಪ್ರಾರ್ಥಿಸುತ್ತೇನೆಂದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T